ಸಂಪುಟ : 10 ಸಂಚಿಕೆ: 175 ಪುಟ : 4+2 ಬೆಲೆ: 3.00 ರವಿವಾರ ಆಗಸ್ಟ್ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 175 Pages : 4+2 Price : 3.00 Sunday August 17 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಅಕ್ಕನಾಗಮ್ಮನವರ ಕುರಿತು ಉಪನ್ಯಾಸ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಆಗಸ್ಟ್ 17ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1659ನೇ ಶರಣ ಸಂಗಮದಲ್ಲಿ ಕ್ರಾಂತಿ ಗಂಗೋತ್ರಿ ಅಕ್ಕನಾಗಮ್ಮನವರ ಸ್ಮರಣೆ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣತತ್ವ ಚಿಂತಕರಾದ ಶರಣೆ ಗೌರಕ್ಕ ಎನ್.ಬಡಿಗಣ್ಣವರ ಉಪನ್ಯಾಸ ನೀಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.



ಲಕ್ಷ್ಮೇಶ್ವರದ ಬಿಸಿಎನ್ ಸ್ಪೆಕ್ಟ್ರಂ ಇಂಗ್ಲೀಷ್ ಮೀಡಿಯಂ ಶಾಲೆಯ ಪುಟಾಣಿಗಳು ಶನಿವಾರ ಶ್ರೀ ಕೃಷ್ಣ ಜನ್ಮಾಷ್ಟಮಿಯ ನಿಮಿತ್ತ ಪುಟಾಣಿ ಕೃಷ್ಣ-ರಾಧೆ-ರುಕ್ಮಿಣಿಯರ ವೇಷ ಧರಿಸಿ ಗಮನ ಸೆಳೆದರು.



ಗದಗ ನಗರದ ವೀರಶೈವ ಲೈಬ್ರರಿ ಬಳಿಯಲ್ಲಿ 21 ದಿನಗಳ ಕಾಲ ಸುದರ್ಶನ ಚಕ್ರ ಯುವ ಮಂಡಳ ವತಿಯಿಂದ ಹಿಂದೂ ಮಹಾ ಗಣಪತಿಯ ಪ್ರತಿಷ್ಠಾಪನೆ ನಿಮಿತ್ತ ಶನಿವಾರ ಸನಾತನ ಧರ್ಮದ ಪದ್ಧತಿಯಂತೆ ಗೋಪೂಜೆ ಮತ್ತು ಭೂಮಿ ಪೂಜೆಯೊಂದಿಗೆ ಧ್ವಜಾರೋಹಣ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥಾಪಕ ಅಧ್ಯಕ್ಷರು, ಉತ್ಸವ ಸಮಿತಿಯ ಗೌರವಾಧ್ಯಕ್ಷರು, ಅಧ್ಯಕ್ಷರು, ಪದಾಧಿಕಾರಿಗಳು, ಕಾರ್ಯಕರ್ತರು, ಹಿಂದೂ ಸಮಾಜ ಬಾಂಧವರು ಉಪಸ್ಥಿತರಿದ್ದರು.

### ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ರಾಜ್ಯ ಗೌರವಾಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲರಿಂದ ಪತ್ರಿಕಾಗೋಷ್ಠಿ

# ರೆಡ್ಡಿ ಸಮಾಜದ ಭಾವನೆಗಳಿಗೆ ದಕ್ಕೆ ತರುವ ಕೆಲಸವಾಗುತ್ತಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಕೆಲವರು ರೆಡ್ಡಿ ಸಮಾಜದ ಭಾವನೆಗಳಿಗೆ ಧಕ್ಕೆ ತರುವ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಧರ್ಮದ ಕಾಲಂನಲ್ಲಿ ಹಿಂದೂ ಹಾಗೂ ಉಪಜಾತಿ ಕಾಲಂನಲ್ಲಿ ರೆಡ್ಡಿ ಎಂದು ನಮೂದಿಸುವಂತೆ ಹೇಳುತ್ತಿದ್ದಾರೆ. ಆದರೆ, ಧರ್ಮದ ಕಾಲಂನಲ್ಲಿ ವೀರಶೈವ ಲಿಂಗಾಯತ ರೆಡ್ಡಿ ಹಾಗೂ ಉಪಜಾತಿ ಕಾಲಂನಲ್ಲಿ ರೆಡ್ಡಿ ಎಂದು ನಮೂದಿಸುವಂತೆ ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ರಾಜ್ಯ ಗೌರವಾಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ನೂತನ ಜನಗಣತಿ ಪ್ರಾರಂಭವಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ಸದಸ್ಯತ್ವ ನೋಂದಣಿಯನ್ನು ಅತೀ ಶೀಘ್ರದಲ್ಲಿ ಮಾಡುವಂತೆ ಕರೆ ನೀಡಲಾಗುವುದು. ರೆಡ್ಡಿ ಸಮಾಜ ಪ್ರಾಚೀನ ಕಾಲದಿಂದ ಇಷ್ಟಲಿಂಗ ಪೂಜೆ ಮಾಡಿಕೊಂಡು ಬಂದಿದೆ. ನಮ್ಮದೇ ಆದ ವಿಧಿ-ವಿಧಾನದ ಸರಣಿ ಹೊಂದಿದ್ದೇವೆ. ಹುಟ್ಟಿದ ವಾರದಲ್ಲಿ ಲಿಂಗುಧಾರಣೆ ಮಾಡಿ ಪೂಜೆಸುತ್ತೇವೆ. ನಮ್ಮ ಸಮಾಜದ ಹೇಮರೆಡ್ಡಿ ಮಲ್ಲಮ್ಮನವರು ಶಿವನನ್ನು ಪ್ರತ್ಯಕ್ಷವಾಗಿ ಕಂಡಿದ್ದಾರೆ ಎಂದು ಹೇಳಿದರು.




ರಾಜ್ಯಾಧ್ಯಕ್ಷ ಶೇಖರಗೌಡ ಮಾಲೀಪಾಟೀಲ ಮಾತನಾಡಿ, ರೆಡ್ಡಿ ಸಮಾಜ ಸ್ವಾಮೀಜಿಗಳು ಕಳೆದ ಎರಡು ವಾರಗಳಿಂದ ಹಿಂದೂ ರೆಡ್ಡಿ ಎಂದು ನಮೂದಿಸಿ ಎಂದು ರಾಜ್ಯಾದ್ಯಂತ ಪ್ರವಾಸ ಮಾಡಿ ಹೇಳಿಕೆ ನೀಡುತ್ತಿದ್ದಾರೆ. ಆದರೆ, ನಾವು ನಮ್ಮ ಸಂಸ್ಕೃತಿ ಬಿಡಬಾರದು. ನಾವು ವೀರಶೈವ ರೆಡ್ಡಿ ಸಮಾಜದಲ್ಲಿ ಮುಂದುವರೆಯೋಣ. ಹೇಮರೆಡ್ಡಿ ಮಲ್ಲಮ್ಮನ ಆಶೀರ್ವಾದದಿಂದ ರೆಡ್ಡಿ ಸಮಾಜದವರು ತಮ್ಮ ಉಪ ಜೀವನವನ್ನು ನಡೆಸುತ್ತಿದ್ದಾರೆ. ಇದರಲ್ಲಿ ಯಾರ ಸಹಾಯ ಹಸ್ತ ಬೇಡ. ಯಾರೂ ಏನೇ ಹೇಳಿದರೂ ನಾವು ನಮ್ಮತನ ಬಿಟ್ಟುಕೊಡಬಾರದು ಎಂದು ಸಮಾಜದ ಮುಖಂಡರಿಗೆ ವಿನಂತಿ ಮಾಡಿದರು.

ಸಮೀಕ್ಷೆಯ ಪ್ರಕಾರ ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ಜನಸಂಖ್ಯೆ ಕಡಿಮೆ ಆಗಿದೆ. ಈ ವರದಿ ಪ್ರಕಾರ ಕೇವಲ 70 ಲಕ್ಷ ಜನಸಂಖ್ಯೆ ಬಂದಿದೆ. ಆದರೆ 1 ಕೋಟಿಗೂ ಅಧಿಕ ಹೆಚ್ಚು ಜನ ರಾಜ್ಯದಲ್ಲಿದ್ದೇವೆ. ರಾಜ್ಯದಲ್ಲಿ ಮತ್ತೊಮ್ಮೆ ಸಮೀಕ್ಷೆ ಮಾಡಿ ನಮ್ಮ ನಿಜವಾದ ಜನಸಂಖ್ಯೆಯನ್ನು ಕಂಡುಹಿಡಿಯುತ್ತೇವೆ. ನಮ್ಮ ಸಮುದಾಯ ಅನೇಕ ಪಂಗಡಗಳಾಗಿ ಒಡೆದು ಹೋಗಿದೆ. ಇದು ಸರ್ಕಾರದ ತಪ್ಪು ಅಲ್ಲ. ರಾಜಕೀಯ ಶಕ್ತಿಗಾಗಿ ನಾವೆಲ್ಲರೂ ಒಂದಾಗಬೇಕು. ಇಲ್ಲದಿದ್ದರೆ ನಮ್ಮ ಮುಂದಿನ ಪೀಳಿಗೆ ನಮಗೆ ಶಾಪ ಹಾಕುವ ಸಮಯ ಬರುತ್ತದೆ. ಈ ಹಿನ್ನೆಲೆಯಲ್ಲಿ ನಾವು ಎಚ್ಚೆತ್ತುಕೊಳ್ಳಬೇಕಿದೆ ಎಂದರು.

ಈ ಸಂದರ್ಭದಲ್ಲಿ ಶೇಖರಗೌಡ ಮಾಲಿಪಾಟೀಲ, ಡಾ. ಕೊಟ್ರೇಶ ಬಿದರಿ, ರೇವಣಸಿದ್ದಪ್ಪ, ಡಾ. ವಾಮದೇವ, ರಘುನಾಥಗೌಡ ಕೆಂಪಲಿಂಗನಗೌಡ್ರ, ಕುಮಾರ ಗಡಗಿ, ಎಸ್.ಎಸ್ ಪಾಟೀಲ, ಫಕ್ಕಿರಪ್ಪ ಕಟ್ಟಿಮನಿ, ಶರಣಗೌಡ ಪಾಟೀಲ ಸರ್ಜಾಪೂರ, ಜಗದೀಶ, ಸುರೇಶ ಶಿರೋಳ, ಲೋಕೇಶ್, ಬಿ.ವ್ಹಿ. ಲೋಹಿತ್, ಅನಿಲಕುಮಾರ ತೆಗ್ಗಿನಮನಿ ಸೇರಿದಂತೆ ಅನೇಕರು ಅಪಸ್ಥಿತರಿದ್ದರು.

> ಈಗಾಗಲೇ ನಮ್ಮ ಜನಾಂಗ ತಮ್ಮ ಶಾಲಾ ದಾಖಲಾತಿಗಳಲ್ಲಿ ವೀರಶೈವ ರಡ್ಡಿ/ಲಿಂಗಾಯತ ರಡ್ಡಿ ದಾಖಲಾತಿ ಮಾಡಿಕೊಂಡಿದ್ದಾರೆ. ಆದರೆ, ಸರ್ಕಾರದಿಂದ ಕೊಡುವ ಜಾತಿ ಪ್ರಮಾಣಪತ್ರಗಳು ವೀರಶೈವ ಲಿಂಗಾಯತ ಇರುವುದರಿಂದ ನಮ್ಮ ಸಮುದಾಯದ ಇತ್ತೀಚಿನ ಪೀಳಿಗೆ 'ರೆಡ್ಡಿ' ಹೆಸರಿನ ಇನ್ನೊಂದು ಪಂಥದ ಹಾಗೂ ಇನ್ನೊಂದು ಪ್ರವರ್ಗದ ಜಾತಿ ಪ್ರಮಾಣಪತ್ರಗಳನ್ನು ಪಡೆಯುತ್ತಿರುವುದರಿಂದ ಅವರ ಶಿಕ್ಷಣ ಮತ್ತು ಉದ್ಯೋಗಕ್ಕೆ ಕಂಟಕವಾಗುತ್ತಿದೆ.
>
> **– ಡಾ. ವಾಮದೇವ.**
> **ಸಮಾಜದ ಮೈಸೂರು ಜಿಲ್ಲಾಧ್ಯಕ್ಷ.**

### ಯೋಜನೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ

# ನಿರ್ಲಕ್ಷ್ಯ ವಹಿಸಿದರೆ ನಿರ್ದಾಕ್ಷಿಣ್ಯ ಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ವಾರ್ಡ್ ಸಭೆ, ಗ್ರಾ.ಪಂ ಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ವಾರ್ಡ್ ಸಭೆಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಿ, ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ಸಿದ್ಧಗೊಳಿಸಿ ಸೆ. 30ರ ಒಳಗಾಗಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕು. ಅ.2ರಂದು ಸಲ್ಲಿಸಿದ ಕರಡುಪ್ರತಿಗಳ ಪರಿಶೀಲಿಸಿ ಸರ್ಕಾರದ ಅನುಮೋದನೆಗೆ ಕಳಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಶನಿವಾರ ಏರ್ಪಡಿಸಿದ್ದ ಯೋಜನೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಮತ್ತು ನಗರದ ಪ್ರದೇಶಗಳಲ್ಲಿ ಆ. 30ರ ಒಳಗಾಗಿ ವಾರ್ಡ್ ಸಭೆ ನಡೆಸಬೇಕು. ಸೆ. 30ರ ಒಳಗಾಗಿ ಗ್ರಾ.ಪಂ ಸಭೆ ಜರುಗಿಸಬೇಕು. ತಾ.ಪಂ ಮತ್ತು ಸ್ಥಳೀಯ ಸಂಸ್ಥೆಯ ಸಭೆಗಳನ್ನು ಸೆ. 20ರ ಒಳಗಾಗಿ ಜರುಗಿಸಿ, ಅಭಿವೃದ್ಧಿ ಯೋಜನೆಗಳ ಕರಡು ಪ್ರತಿಗಳನ್ನು ಸೆ. 30ರ ಒಳಗಾಗಿ ಜಿ.ಪಂಗೆ ಸಲ್ಲಿಸಬೇಕು ಎಂದು ಗಡವು ನೀಡಿದರು.

ಇದೇ ವೇಳೆ ಸಭೆಗಳನ್ನು ಜರುಗಿಸದೇ ಅಭಿವೃದ್ಧಿ ಯೋಜನೆಗೆ ಕರಡು ಪ್ರತಿಯನ್ನು ತಯಾರಿಸಲು ಸಹಕಾರ ನೀಡದಿರುವ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನೋಟೀಸ್ ನೀಡಬೇಕು. ಕೆಳಹಂತದ ಅಧಿಕಾರಿಗಳಿಗೆ ಕರಡು ಪ್ರತಿ ಸಿದ್ಧತೆಯಲ್ಲಿ ಹಾಗೂ ಅಧಿಕಾರಿ ಕಾರ್ಯವ್ಯಾಪ್ತಿ ಏನು ಎಂಬುದರ ಕುರಿತು ಮಾರ್ಗಸೂಚಿ ಪ್ರತಿ ನೀಡುವ ಮೂಲಕ ಅಧಿಕಾರಿಗಳಿಗೆ ತಿಳುವಳಿಕೆ ನೀಡಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು. ಜಿಲ್ಲಾಡಳಿತ ಸೂಚಿತ ದಿನಾಂಕದ ಒಳಗೆ ವಾರ್ಡ್‌ಸಭೆ ಜರುಗಿಸಿ, ಕರಡು ಪ್ರತಿಗಳನ್ನು ಅನುಮೋದನೆಗೆ ಸಲ್ಲಿಸಬೇಕು. ಎಲ್ಲ ಸಭೆಗಳ ವಿಡಿಯೋಗ್ರಾಫ್ ಮಾಡಬೇಕು ಎಂದು ಸೂಚಿಸಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಗ್ರಾ.ಪಂ ಸಭೆಗೆ ಸೆಕ್ರೆಟರಿ, ಪಿಡಿಒಗಳು ಹಾಜರಾಗದೇ ವೈಮನಸ್ಸು ಮೂಡಿ ಸಭೆ ಬರಕಾಸ್ತು ಆಗುತ್ತಿವೆ. ಗ್ರಾ.ಪಂ ಅಧ್ಯಕ್ಷನ ಆದೇಶದಂತೆ ಪಿಡಿಓ ಸಭೆ ಕರೆದಿರುತ್ತಾರೆ. ಹಾಗಾಗಿ ಎಲ್ಲರೂ ಸಭೆಗೆ ಹಾಜರಾಗಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಮಾತನಾಡಿ, ಗ್ರಾಮ ಸಭೆಗಳನ್ನು ಬೆಳಗ್ಗೆ 10 ಗಂಟೆ ಒಳಗಾಗಿ ಜರಗಿಸುವುದು ಸೂಕ್ತ. ಕೆಲಸದ ಅವಧಿಯಲ್ಲಿ ಸಭೆಗಳನ್ನು ಹಮ್ಮಿಕೊಂಡರೆ ರೈತರು ಹೊಲಗದ್ದೆಗಳಿಗೆ ತೆರಳಿರುತ್ತಾರೆ. ಹಾಗಾಗಿ ಬೆಳಗಿನ ಜಾವ ಹಮ್ಮಿಕೊಳ್ಳುವುದು ಸೂಕ್ತ ಎಂದರು.

ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರು ಮಾತನಾಡಿ, ಮುಳಗುಂದದಲ್ಲಿ ಸಭೆ ನಡೆದಿದೆ. ಇನ್ನುಳಿದ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಭೆ ನಡೆಸುವುದು ಬಾಕಿ ಇದೆ ಎಂದು ಮಾಹಿತಿ ನೀಡಿದರು. ಜಿ.ಪಂ ಸಿಇಓ ಭರತ್ ಎಸ್ ಮಾತನಾಡಿ, ಕರಡು ಪ್ರತಿ ಸಲ್ಲಿಸುವಾಗ ದಾಖಲಾತಿಗಳನ್ನು ಪರಿಪೂರ್ಣಗೊಳಿಸಬೇಕು. ರಾಜ್ಯದಲ್ಲಿ ಮಾದರಿ ಗ್ರಾಮಸಭೆಗಳು ಜರುಗಬೇಕು ಎಂದರು. ಸಭೆಯಲ್ಲಿ ತಾ.ಪಂ, ಗ್ರಾ.ಪಂ, ಜಿ.ಪಂ ಅಧಿಕಾರಿಗಳು, ಪಿಡಿಓಗಳು, ಸಹಕಾರ ಸಂಘ, ಹಾಲು ಉತ್ಪಾದಕರ ಒಕ್ಕೂಟಗಳ ಪದಾಧಿಕಾರಿಗಳು ಇದ್ದರು.

> ಈ ಹಿಂದಿನ ಗ್ರಾ.ಪಂ, ಸ್ಥಳೀಯ ಸಂಸ್ಥೆಗಳ ವಾರ್ಡ್ ಸಭೆ ನಡೆಯದಿರುವ ಕುರಿತು ಬೇಸರ ವ್ಯಕ್ತಪಡಿಸಿದ ಸಚಿವರು, ನಗರ ವ್ಯಾಪ್ತಿಯಲ್ಲಿ ಕೇವಲ 54 ವಾರ್ಡ್ ಸಭೆಗಳು ಜರುಗಿವೆ. ಇನ್ನೂ 150ಕ್ಕೂ ಅಧಿಕ ಸಭೆಗಳು ಜರುಗಬೇಕು. ಗ್ರಾಮೀಣ ಪ್ರದೇಶದಲ್ಲಿ ವಾರ್ಡ್ ಸಭೆ ಮತ್ತು ಗ್ರಾಮಸಭೆಗಳು ಜರುಗುತ್ತಿಲ್ಲ. ಕಾನೂನು ತಿರಸ್ಕರಿಸಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಕನಿಕರ ತೋರದೆ ಕ್ರಮ ವಹಿಸಲಾಗುವುದು.
>
> **– ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**

### ತಾಲೂಕಾ ಕ್ರೀಡಾಂಗಣದಲ್ಲಿ ನಿರ್ಮಾಣವಾಗುತ್ತಿರುವ ಈಜುಕೊಳ ವೀಕ್ಷಿಸಿದ ಶಾಸಕ ಜಿ.ಎಸ್. ಪಾಟೀಲ

# ವರ್ಷ ಕಳೆದರೂ ಮುಗಿಯದ ಕಾಮಗಾರಿ

■ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ತಾಲೂಕಾ ಕ್ರೀಡಾಂಗಣದಲ್ಲಿ ನಿರ್ಮಾಣವಾಗುತ್ತಿರುವ ಈಜುಕೊಳ ಕಾಮಗಾರಿ ಸ್ಥಳಕ್ಕೆ ಶುಕ್ರವಾರ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಭೇಟಿ ನೀಡಿದರು.


ತಾಲೂಕಾ ಕ್ರೀಡಾಂಗಣದಲ್ಲಿ ನಿರ್ಮಾಣಗೊಳ್ಳುತ್ತಿರುವ ಈಜುಕೊಳ ಕಾಮಗಾರಿಗೆ ಶಾಸಕ ಜಿ.ಎಸ್. ಪಾಟೀಲ 2 ಕೋಟಿ ರೂಗಳ ಅನುದಾನವನ್ನು ಒದಗಿಸಿದ್ದಾರೆ. ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ವರ್ಷಗಳೇ ಗತಿಸಿವೆ. ನಡೆದಿರುವ ಕಾಮಗಾರಿ ಕಳಪೆ ಮಟ್ಟದಾಗಿದೆ ಮತ್ತು ಆಮೆಗತಿಯಲ್ಲಿ ಸಾಗುತ್ತಿರುವುದನ್ನು ಪರಿಶೀಲಿಸಿದ ಶಾಸಕ ಜಿ.ಎಸ್. ಪಾಟೀಲ ದೂರವಾಣಿ ಮೂಲಕ ಗುತ್ತಿಗೆದಾರರನ್ನು ಸಂಪರ್ಕಿಸಿ ತರಾಟೆಗೆ ತೆಗೆದುಕೊಂಡರಲ್ಲದೆ, ಕಾಮಗಾರಿಗೆ ಚಾಲನೆ ನೀಡಿ ವರ್ಷಗಳೇ ಕಳೆದರೂ ಇನ್ನೂ ಪೂರ್ಣವಾಗಿಲ್ಲ. ಹೀಗಾದರೆ ನಾನು ಬೇರೆ ಗುತ್ತಿಗೆದಾರರಿಗೆ ಕಾಮಗಾರಿಯನ್ನು ವಹಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.



ಗುತ್ತಿಗೆದಾರನನ್ನು ತರಾ-ಟೆಗೆ ತೆಗೆದುಕೊಂಡ ಶಾಸಕರು, ಕಳಪೆ ಕಾಮಗಾರಿಯನ್ನು ಸಹಿಸುವುದಿಲ್ಲ ಎಂದು ಈ ಮೊದಲೇ ತಿಳಿಸಿದ್ದೇನೆ. ಇದೇ ರಿತಿ ಮುಂದುವರೆಯುವುದು ಸರಿಯಲ್ಲ. ನೀವು ಅರ್ಥ ಮಾಡಿಕೊಳ್ಳಬೇಕು, ಇಲ್ಲದ ಕಾರಣಗಳನ್ನು ಹೇಳಿ ದಿನ ಕಳೆದರೆ ಹೇಗೆ ಎಂದು ಪ್ರಶ್ನಿಸಿದ ಶಾಸಕರು, ಇನ್ನೆಷ್ಟು ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸುತ್ತೀರಿ ಎನ್ನುವುದನ್ನು ಸ್ಪಷ್ಟಪಡಿಸಿ ಎಂದರು.

ಆಗ ಗುತ್ತಿಗೆದಾರ ತೀರ್ಥರಾಜ ಅಕ್ಟೋಬರ್ ತಿಂಗಳೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವುದಾಗಿ ಶಾಸಕರಿಗೆ ವಿವರಿಸಿದರು. ನಂತರ ಶಾಸಕರು ಚಿಕ್ಕ ಮಕ್ಕಳಿಗಾಗಿ ಪ್ರತ್ಯೇಕವಾಗಿ ನಿರ್ಮಿಸುತ್ತಿರುವ ಈಜುಕೊಳವನ್ನು ಹಾಗೂ ಇತರೆ ಕಟ್ಟಡಗಳನ್ನು ವೀಕ್ಷಿಸಿ ಶೀಘ್ರವೇ ಕಾಮಗಾರಿಯನ್ನು ಪೂರ್ಣಗೊಳಿಸಿ ಎಂದು ಗುತ್ತಿಗೆದಾರರಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ವಿ.ಬಿ. ಸೋಮನಕಟ್ಟಿಮಠ ಉಪಸ್ಥಿತರಿದ್ದರು.

> ಭೂ ಸೇನಾ ನಿಗಮದಿಂದ ಗುತ್ತಿಗೆ ಪಡೆದಿರುವ ಗುತ್ತಿಗೆದಾರರು ಈಜುಕೊಳ ನಿರ್ಮಾಣದ ಸಂದರ್ಭದಲ್ಲಿ ಓರ್ವ ಕೆಲಸಗಾರನನ್ನು ತೆಗೆದುಕೊಂಡಿದ್ದು, ಅವರಿಂದಲೇ ಎಲ್ಲವನ್ನೂ ನಿರ್ವಹಿಸುತ್ತಿದ್ದಾರೆ. ನಿಗಮದವರೂ ಇತ್ತ ತಲೆ ಹಾಕಿಲ್ಲ. ಹೀಗಾಗಿ ಈಜುಕೊಳ ಕಾಮಗಾರಿ ತೀರಾ ಕಳಪೆಯಿಂದ ಕೂಡಿದೆ ಎಂದು ಸ್ಥಳದಲ್ಲಿದ್ದ ಕೆಲ ಕ್ರೀಡಾಪಟುಗಳು ಶಾಸಕರ ಗಮನಕ್ಕೆ ತರುತ್ತಿದ್ದಂತೆ ಶಾಸಕ ಜಿ.ಎಸ್. ಪಾಟೀಲರು ಕ್ರೀಡಾ ಇಲಾಖೆ ಮತ್ತು ಭೂ ಸೇನಾ ನಿಗಮದ ಅಧಿಕಾರಿಗಳಿಗೆ ಎಚ್ಚರಿಸುವುದಾಗಿ ತಿಳಿಸಿದರು.



## ಸಾಕ್ಷಿ ಸುಭಾಷಿತ

"ನಿಮ್ಮ ಮೊದಲ ವಿಜಯದ ನಂತರ ವಿಶ್ರಾಂತಿ ತೆಗೆದುಕೊಳ್ಳಬೇಡಿ ಏಕೆಂದರೆ ನೀವು ಎರಡನೇಯಲ್ಲಿ ವಿಫಲವಾದರೆ, ನಿಮ್ಮ ಮೊದಲ ಗೆಲುವು ಕೇವಲ ಅದೃಷ್ಟ ಎಂದು ಹೇಳಲು ಹೆಚ್ಚಿನ ತುಟಿಗಳು ಕಾಯುತ್ತಿವೆ."

–ಎಪಿಜೆ ಅಬ್ದುಲ್ ಕಲಾಂ.

## ಸಂಪಾದಕೀಯ

# ಟ್ರಂಪ್ ಆರ್ಥಿಕ ನೀತಿಗಳು: ಜಾಗತಿಕ ರಾಜಕೀಯದ ಮೇಲಿನ ಪರಿಣಾಮ

ಅಮೆರಿಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಇತ್ತೀಚಿನ ಹೇಳಿಕೆಗಳು ಜಾಗತಿಕ ಆರ್ಥಿಕ ಮತ್ತು ರಾಜಕೀಯ ಸ್ಥಿರತೆಯ ಮೇಲೆ ಹೊಸ ಕಳವಳಗಳನ್ನು ಹುಟ್ಟು ಹಾಕಿವೆ.

ಇತ್ತೀಚೆಗೆ ಭಾರತದ ಉತ್ಪನ್ನಗಳ ಮೇಲೆ 25% ಹೆಚ್ಚುವರಿ ಸುಂಕವನ್ನು ವಿಧಿಸುವ ಮೂಲಕ ಭಾರತದ ಮೇಲಿನ ಒಟ್ಟು ಸುಂಕದ ಪ್ರಮಾಣ 50% ಕ್ಕೆ ಏರಿಕೆ ಕಂಡಿದೆ. ಇದು ಭಾರತೀಯ ರಫ್ತುದಾರರಿಗೆ ತೀವ್ರ ಆಘಾತ ನೀಡಿದೆ. ಹೆಚ್ಚುವರಿ ಸುಂಕಗಳ ಮೂಲಕ ಟ್ರಂಪ್, ಅಮೆರಿಕ ಫಸ್ಟ್ ಎಂಬ ತಮ್ಮ ನೀತಿಯನ್ನು ಮತ್ತಷ್ಟು ಬಲಪಡಿಸಲು ಮುಂದಾಗಿದ್ದಾರೆ.

ಇದರೊಂದಿಗೆ, ರಷ್ಯಾದಿಂದ ತೈಲ ಖರೀದಿಸುವ ದೇಶಗಳ ಮೇಲೆ ಸುಂಕ ವಿಧಿಸುವ ಕುರಿತು 2–3 ವಾರಗಳಲ್ಲಿ ಪರಿಶೀಲನೆ ನಡೆಸುವುದಾಗಿ ಟ್ರಂಪ್ ಹೇಳಿರುವುದು ಜಾಗತಿಕವಾಗಿ ತೈಲ ಮಾರುಕಟ್ಟೆಗಳಲ್ಲಿ ಆತಂಕ ಮೂಡಿಸಿದೆ. ರಷ್ಯಾದ ತೈಲದ ಪ್ರಮುಖ ಆಮದುದಾರರಲ್ಲಿ ಭಾರತವೂ ಒಂದು. ಅಮೆರಿಕ ಇಂತಹ ಸುಂಕಗಳನ್ನು ವಿಧಿಸಿದರೆ, ಅದು ಭಾರತದ ಆರ್ಥಿಕತೆಯ ಮೇಲೆ ನೇರವಾಗಿ ಪರಿಣಾಮ ಬೀರಲಿದೆ.

ಪುಟಿನ್ ಜೊತೆಗಿನ ಮಾತುಕತೆ ವಿಫಲವಾದರೆ ಭಾರತದ ಮೇಲೆ ಮತ್ತಷ್ಟು ಸುಂಕ ವಿಧಿಸುವುದಾಗಿ ಹೇಳಿಕೆ ನೀಡಿದ್ದು, ಅಮೆರಿಕದ ವಿದೇಶಾಂಗ ನೀತಿಯಲ್ಲಿ ಭಾರತವನ್ನು ಒಂದು ಒತ್ತೆಯಾಳುವನ್ನಾಗಿ ಬಳಸಿಕೊಳ್ಳುವ ಪ್ರಯತ್ನ ಎಂದು ಸ್ಪಷ್ಟವಾಗಿ ಕಾಣಿಸುತ್ತಿದೆ.

ಟ್ರಂಪ್ ಅವರ ಈ ನಡೆಗಳು ಅಮೆರಿಕದ ಆರ್ಥಿಕ ಮತ್ತು ರಾಜಕೀಯ ಹಿತಾಸಕ್ತಿಗಳನ್ನು ಮಾತ್ರ ಕೇಂದ್ರೀಕರಿಸಿಕೊಂಡಿವೆ. ಇದು ಭಾರತದ ಆರ್ಥಿಕತೆಯ ಮೇಲೆ ಮತ್ತಷ್ಟು ಒತ್ತಡ ಹೇರುವುದಲ್ಲದೆ, ಜಾಗತಿಕ ರಾಜಕೀಯ ಸಮೀಕರಣಗಳಲ್ಲಿ ಭಾರತದ ಸ್ಥಾನವನ್ನು ಸಂಕೀರ್ಣಗೊಳಿಸುತ್ತವೆ.

ಭಾರತವು ಈ ಸವಾಲುಗಳನ್ನು ಎದುರಿಸಲು ತನ್ನ ಆರ್ಥಿಕ ಮತ್ತು ವಿದೇಶಾಂಗ ನೀತಿಯಲ್ಲಿ ಸೂಕ್ತ ಬದಲಾವಣೆಗಳನ್ನು ಮಾಡಿಕೊಳ್ಳಬೇಕಾದ ಅನಿವಾರ್ಯತೆ ಇದೆ.

### ಭಗವಾನ್ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ನುಡಿ

# ಭಗವದ್ಗೀತೆಯ ಸಂದೇಶ ಪ್ರತಿಯೊಬ್ಬರಿಗೂ ಅನ್ವಯ

■ವಿಜಯಸಾಕ್ಷಿ ಸುದ್ದಿ, ಗದಗ

'ಕರ್ಮಣ್ಯೇ ವಾಧಿಕಾರಸ್ಥೆ ಮಾ ಫಲೇಶು ಕದಾಚನ' ಎಂಬ ಭಗವದ್ಗೀತೆಯ ಸಂದೇಶದಂತೆ ಪ್ರತಿಯೊಬ್ಬರೂ ತಮ್ಮ ತಮ್ಮ ಕರ್ತವ್ಯಗಳನ್ನು ಪ್ರತಿಫಲಾಪೇಕ್ಷೆಯಿಲ್ಲದೇ ನಿಭಾಯಿಸಬೇಕು. ಈ ಸಂದೇಶವು ಪ್ರತಿಯೊಬ್ಬರಿಗೂ ಅನ್ವಯವಾಗುತ್ತದೆ ಎಂದು ರಾಜ್ಯದ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು. ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶನಿವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಭಗವಾನ್ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು.

ಶ್ರೀ ಕೃಷ್ಣ ಪರಮಾತ್ಮನು ಉಪದೇಶಿಸಿದ ಭಗವದ್ಗೀತೆಯು ವಿಶ್ವದಲ್ಲಿಯೇ ಪ್ರಸಿದ್ಧವಾಗಿದೆ. ಹಿಂದೂ ಸಂಸ್ಕೃತಿಯ ಪವಿತ್ರ ಗ್ರಂಥವಾಗಿದೆ. ಭಗವದ್ಗೀತೆ ಮೂಲಕ ಜನರಿಗೆ ಕೃಷ್ಣನು ನೀನು ಕರ್ತವ್ಯ ನಿಭಾಯಿಸು. ಪ್ರತಿಫಲ ಭಗವಂತನಿಗೆ ಬಿಡು ಎಂದು ಸಾರಿದ್ದಾನೆ. ಎಲ್ಲ ದೇವರನ್ನು ಒಂದೊಂದು ಜಾತಿಗೆ ಮಿತಿಗೊಳಿಸಲಾಗಿದೆ. ಕೃಷ್ಣ



ಎಂಬ ಹೆಸರು ದೇಶದಲ್ಲಿ ಅತೀ ಹೆಚ್ಚು ಬಳಸುವ ಪದವಾಗಿದೆ. ಬದುಕಿನ ಎಲ್ಲ ಕ್ಷೇತ್ರಗಳ ಕೆಲಸಗಳಿಗೆ ಕೃಷ್ಣ ಪರಮಾತ್ಮನನ್ನು ನೆನಪಿಸಿಕೊಡುತ್ತದೆ. ನನ್ನ ಸಾರ್ವಜನಿಕ ಬದುಕಿನಲ್ಲಿ ಕೃಷ್ಣ ಎಂಬ ಹೆಸರಿನ ರಾಜಕಾರಣಿ, ಕೃಷ್ಣ ನೀರಾವರಿ ಯೋಜನೆಯಿಂದ ನನ್ನ ರಾಜಕೀಯ ಜೀವನ ಮೇಲ್ಪಂಕ್ತಿಗೆ ಬರಲು ಕಾರಣವಾಗಿದೆ. ಗೊಲ್ಲರನ್ನು ಗುರುತಿಸುವ ಕೆಲಸ ಸರ್ಕಾರ ಮಾಡುತ್ತಿದೆ. ಅವರಿಗೆ ಸೂಕ್ತ ಸ್ಥಾನಮಾನ ನೀಡಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದು ಹೇಳಿದರು.

ಯಾದವ ಸಮುದಾಯದ ಅಧ್ಯಕ್ಷ ಹರೀಶ ಪೂಜಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಸಾವಿತ್ರಮ್ಮ ಹಟ್ಟಿ ಅವರ ಭಾಮಿನಿ ಕೀರ್ತನೆ ಎಂಬ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಾಗೂ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ಗೊಲ್ಲ ಸಮುದಾಯದವರನ್ನು ಸನ್ಮಾನಿಸಲಾಯಿತು. ಮುಳಗುಂದದ ಆರ್.ಎನ್. ದೇಶಪಾಂಡೆ ಸ.ಪ್ರ.ದ ಕಾಲೇಜಿನ ಪ್ರಾಚಾರ್ಯ ಡಾ.ರಮೇಶ ಕಲ್ಲನಗೌಡರ ಶ್ರೀ ಕೃಷ್ಣನ ಜೀವನ ಮತ್ತು ಸಂದೇಶದ ಕುರಿತು ಉಪನ್ಯಾಸ ನೀಡಿದರು. ಲಿಟಲ್ ಚಾಂಪ್ಸ್ ಶಾಲೆಯ ಮಕ್ಕಳು ನೃತ್ಯ ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಹಾತಲಗೇರಿ ಗ್ರಾ.ಪಂ ಅಧ್ಯಕ್ಷ ರಾಮನಗೌಡ ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಎಸ್.ಎನ್. ಬಳ್ಳಾರಿ, ಕಡೆಮನಿ ಸೇರಿದಂತೆ ಸಮುದಾಯದ ಹಿರಿಯರು, ಗಣ್ಯರು ಹಾಜರಿದ್ದರು.

ಗದಗ ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ ಸ್ವಾಗತಿಸಿದರು. ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ವಂದಿಸಿದರು.

ಈ ಮೊದಲು ಸರ್ಕಾರಿ ಅಧಿಕಾರಿಗಳ ನಡುವೆ ಮಾತ್ರ ಜಯಂತಿ ನಡೆಯುತ್ತಿದ್ದವು. ಈಗ ಜಯಂತಿಯ ಸ್ವರೂಪ ಬದಲಾಗಿರುವುದು ಖುಷಿ ತಂದಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇಂತಹ ಕಾರ್ಯಕ್ರಮ ಆಯೋಜನೆ ಮಾಡಿದ್ದಕ್ಕೆ ಅಭಿನಂದನಾರ್ಹ. ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಜಯಂತಿ ಮೂಲಕ ಸಮಾನತೆ ಸಾರುತ್ತಿದೆ ಎಂದು ಸಚಿವ ಎಚ್.ಕೆ. ಪಾಟೀಲ ನುಡಿದರು.

# ಸಮುದಾಯ ಭವನ ಕಟ್ಟಡ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ನಾಡಿನ ಹಲವಾರು ಜಿಲ್ಲೆಗಳಿಂದ ಅಪಾರ ಭಕ್ತ ವೃಂದವನ್ನು ಹೊಂದಿರುವ ಶಿವನಾರದಮುನಿ ಸ್ವಾಮಿ ಸಮುದಾಯ ಭವನ ನಿರ್ಮಾಣದಿಂದ ಭಕ್ತರಿಗೆ ವಿಶ್ರಾಂತಿ ಪಡೆಯಲು ಮತ್ತು ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಲು ಅನುಕೂಲವಾಗಲಿದೆ ಎಂದು ಚಿಗಟೇರಿ ನಾರದಮುನಿ ಸೇವಾ ಟ್ರಸ್ಟ್ ಅಧ್ಯಕ್ಷ ಅಣಬೇರು ರಾಜಣ್ಣ ತಿಳಿಸಿದರು.

ಹರಪನಹಳ್ಳಿ ತಾಲೂಕಿನ ಚಿಗಟೇರಿ ಗ್ರಾಮದ ಶಿವನಾರದಮುನಿ ದೇವಸ್ಥಾನದ ಎದುರುಗಡೆ ಶಿವನಾರದಮುನಿ ಸೇವಾ ಟ್ರಸ್ಟ್ ಹಾಗೂ ವಿಧಾನ ಪರಿಷತ್ ಸದಸ್ಯರ ಸಹಯೋಗದಲ್ಲಿ ನಿರ್ಮಿಸಿರುವ ನೂತನ ಮಹಾ ಸಮುದಾಯ ಭವನ ಕಟ್ಟಡವನ್ನು



ಶನಿವಾರ ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾಮಿಯ ದರ್ಶನಕ್ಕೆಂದು ನಾಡಿನಾದ್ಯಂತ ಸಾವಿರಾರು ಭಕ್ತರು ರಥೋತ್ಸವ, ಶ್ರಾವಣದ ಕೊನೆಯ ವಾರ, ಹುಣ್ಣಿಮೆ, ಅಮವಾಸ್ಯೆ ಸೇರಿದಂತೆ ವಿಶೇಷ ದಿನಗಳಲ್ಲಿ ಭಕ್ತರು ವರ್ಷದಿಂದ ವರ್ಷಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದು, ಅವರಿಗೆ ವಿಶ್ರಾಂತಿ ಪಡೆದುಕೊಳ್ಳಲು ಅನುಕೂಲವಾಗುವಂತೆ ನೂತನ ಭವನ ನಿರ್ಮಿಸಲಾಗಿದೆ ಎಂದರು. ಸಮಿತಿಯ ಕಾರ್ಯದರ್ಶಿ ಪಲ್ಲಾಗಟ್ಟಿ ನಾಗರಾಜ್ ಮಾತನಾಡಿ, ಯಾವುದೇ ಧಾರ್ಮಿಕ ಕ್ಷೇತ್ರಗಳು ಅಭಿವೃದ್ಧಿಯಾಗಲು ಸ್ಥಳೀಯ ಟ್ರಸ್ಟ್ ಅಥವಾ ಸಮಿತಿಯ ಮುಂದಾಳತ್ವ ಹೊಂದಿರುವವರು ನಿಸ್ವಾರ್ಥ ಮನೋಭಾವ ಹೊಂದಿರಬೇಕು. ಅದರಂತೆಯೇ ಅಣಬೇರು ರಾಜಣ್ಣನವರು ಅವರ ಬದುಕಿನುದ್ದಕ್ಕೂ ಧಾರ್ಮಿಕ ಕಾರ್ಯಗಳಲ್ಲಿ ಸಂಪೂರ್ಣ ತೊಡಗಿಸಿಕೊಂಡಿದ್ದಾರೆ. ಅವರ ಮಾರ್ಗದರ್ಶನದಂತೆ ಮುಂದಿನ ದಿನಗಳಲ್ಲಿ ಹೆಚ್ಚಿನ ಮೂಲಸೌಲಭ್ಯ ಪಡೆದುಕೊಳ್ಳುವ ಕಡೆಗೆ ಗಮನವಹಿಸೋಣ ಎಂದರು. ಸಮಿತಿಯ ಪದಾಧಿಕಾರಿಗಳಾದ ಶಾಮನೂರು ಬಸಪ್ಪ, ವಿ.ಕೆ. ಷಡಕಪ್ಪ ವಡ್ಡಿನಹಳ್ಳಿ, ಸುರೇಶ್ ಇಂಜಿನಿಯರ್, ಪರಮೇಶ್ವರಪ್ಪ ಕಕ್ಕರಗೋಳ, ಕೆ.ಬಿ. ಬಸವಲಿಂಗಪ್ಪ ಬಿ.ಕಲ್ಪನಹಳ್ಳಿ, ವೇದಮೂರ್ತಿ ಹುಲಿಕಟ್ಟಿ, ದ್ಯಾಮನಗೌಡ, ಪಿ.ಹಾಲಪ್ಪ, ಹುಣಸಿಹಳ್ಳಿ ಹನುಮಂತಪ್ಪ, ಬಳಿಗನೂರು ರಾಮನಗೌಡ, ಗಾಂಧಿನಗರ ಜಯಣ್ಣ, ಆಸಗೋಡ್ ಅಶೋಕ್, ಹುಲಿಯಾಳ್ ನಾರಪ್ಪ, ಗ್ರಾ.ಪಂ ಅಧ್ಯಕ್ಷ ನಾಗರಾಜ್ ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡಿದ್ದರು.

### ಚರ್ಮರೋಗ ತಜ್ಞರ ಸಂಘ–ಐಎಂಎದಿಂದ ಮನವಿ ಅರ್ಪಣೆ

# ನಕಲಿ ವೈದ್ಯರ ವಿರುದ್ಧ ಕ್ರಮಕ್ಕೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಚರ್ಮ ಹಾಗೂ ಕೂದಲು ಚಿಕಿತ್ಸೆಯಲ್ಲಿ ತೊಡಗಿರುವ ಯಾವುದೇ ವೈದ್ಯಕೀಯ ಪದವಿ ಇಲ್ಲದ ನಕಲಿ ವೈದ್ಯರ ವಿರುದ್ಧ ಅಗತ್ಯ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿ ಭಾರತೀಯ ಚರ್ಮರೋಗ, ಕುಷ್ಠರೋಗ, ಲೈಂಗಿಕ ರೋಗಗಳ ತಜ್ಞರ ಸಂಘ ಕರ್ನಾಟಕ ಶಾಖೆಯ ಕರೆಯ ಮೇರೆಗೆ ಗದಗ ಜಿಲ್ಲಾ ಘಟಕ ಹಾಗೂ ಗದಗ ಐಎಂಎ ವತಿಯಿಂದ ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ್ ಕೆ.ಆರ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಅವರಿಗೆ ಪ್ರತ್ಯೇಕ ಮನವಿ ಸಲ್ಲಿಸಿ ಆಗ್ರಹಿಸಿದರು.

ದಂತವೈದ್ಯರು, ಆಯುಷ್ ವೈದ್ಯರು, ಬ್ಯೂಟಿಷಿಯನ್‌ಗಳು, 10/12ನೇ ತರಗತಿ ಪಾಸಾದವರು, ಹಾಗೂ ಎಂಸಿಐ/ ಎನ್‌ಎಂಸಿ ಮಾನ್ಯತೆ ಸ್ಪೆಷಲೈಸೇಶನ್ ಇಲ್ಲದ



ಎಂಬಿಬಿಎಸ್ ಪದವೀಧರರು ನಕಲಿ ದಾಖಲೆಗಳನ್ನು ಹೊಂದಿ ತಮನ್ನು ಚರ್ಮರೋಗ ಅಥವಾ ಕಾಸ್ಮೆಟಾಲಜಿಸ್ಟ್ ಎಂದು ಪರಿಚಯಿಸಿಕೊಂಡು ಚಿಕಿತ್ಸೆಯನ್ನು ನೀಡಿ ಸಾರ್ವಜನಿಕರಿಗೆ ಮೋಸ ಮಾಡುತ್ತಿದ್ದಾರೆ. ಇಂತಹ ಅನರ್ಹ ವ್ಯಕ್ತಿಗಳು ಕ್ಲಿನಿಕ್‌ಗಳನ್ನು ನಡೆಸುತ್ತಿದ್ದು, ಲೇಸರ್, ಮೈಕ್ರೋನೀಡ್ಲಿಂಗ್ ಯಂತ್ರಗಳಂತಹ ವೈದ್ಯಕೀಯ ಸಾಧನಗಳನ್ನು ಬಳಸುತ್ತಿದ್ದಾರೆ. ಇವುಗಳನ್ನು ಕಾನೂನಿನ ಪ್ರಕಾರ ಮಾತ್ರ ಮಾನ್ಯ ಡರ್ಮಟಾಲಜಿಸ್ಟ್‌ಗಳು ಮತ್ತು ಪ್ಲಾಸ್ಟಿಕ್ ಶಸ್ತ್ರಚಿಕಿತ್ಸಕರು ಬಳಸಬಹುದು. ಇಂತಹ ನಕಲಿ ತಜ್ಞರು ಮಾಡಿದ ಚಿಕಿತ್ಸೆಗಳಿಂದ ಮುಖ, ಕೂದಲು, ಚರ್ಮಗಳಿಗೆ ಹಾನಿಯಾಗಿದ್ದು, ಹಲವಾರು ಸಂದರ್ಭಗಳಲ್ಲಿ ಜೀವಕ್ಕೂ ಹಾನಿಯಾಗಿದೆ ಎಂದು ಮನವಿಯಲ್ಲಿ ವಿವರಿಸಿದರು. ಈ ಸಂದರ್ಭದಲ್ಲಿ ರಾಜ್ಯ ಚರ್ಮ ರೋಗ ತಜ್ಞರ ಸಂಘದ ನಿಕಟಪೂರ್ವ ಅಧ್ಯಕ್ಷ, ಹಿರಿಯ ಚರ್ಮರೋಗ ತಜ್ಞ ಡಾ. ಪ್ರಕಾಶ ಕೊಲ್ಲೋಳಗಿ, ಗದುಗಿನ ಕೆ.ಹೆಚ್. ಪಾಟೀಲ ವೈದ್ಯಕೀಯ ವಿದ್ಯಾಲಯದ ಚರ್ಮರೋಗ ವಿಭಾಗದ ಮುಖ್ಯಸ್ಥರಾದ ಪ್ರಾಧ್ಯಾಪಕ ಡಾ. ಗಿರೀಶ ನಾಗರಾಳ, ಐಎಡಿವಿಎಲ್ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಡಾ. ವೀರೇಶ ದ್ಯಾವಣ್ಣವರ, ಗದಗ ಐಎಂಎ ಕಾರ್ಯದರ್ಶಿ, ಚರ್ಮರೋಗ ತಜ್ಞ ಡಾ. ತುಕಾರಾಮ ಸೋರಿ, ಡಾ. ಸಲೀಂ ಜಮಾದಾರ, ಡಾ. ಜಿ.ಎಸ್. ಪಲ್ಲೇದ, ಡಾ. ಶರಣ ಆಲೂರ ಮುಂತಾದವರಿದ್ದರು.

ಈಗಾಗಲೇ ಭಾರತೀಯ ಚರ್ಮರೋಗ, ಕುಷ್ಠರೋಗ, ಲೈಂಗಿಕ ರೋಗಗಳ ತಜ್ಞರ ಸಂಘ ಕರ್ನಾಟಕ ಶಾಖೆಯ ರಾಜ್ಯದಾದ್ಯಂತ ಅಭಿಯಾನವನ್ನು ಪ್ರಾರಂಭಿಸಿದೆ. ಎಂಸಿಐ/ಎನ್‌ಎಂಸಿ ಮಾನ್ಯತೆ ಇಲ್ಲದೆ, ಯಾವುದೇ ವೈದ್ಯಕೀಯ ಪದವಿ ಅರ್ಹತೆ ಇಲ್ಲದವರು ಚರ್ಮರೋಗ, ಕೂದಲು ಕಸಿ ತಜ್ಞರೆಂದು ಹೇಳಿಕೊಂಡು ಸಾರ್ವಜನಿಕರ ಆರೋಗ್ಯಕ್ಕೆ ಅಪಾಯವನ್ನು ಉಂಟುಮಾಡುತ್ತಿರುವದನ್ನು ತಡೆಗಟ್ಟಿ ಸಾರ್ವಜನಿಕರ ಹಿತಾಸಕ್ತಿಯನ್ನು ಕಾಯ್ದುಕೊಳ್ಳುವುದೇ ಸಂಘಟನೆಯ ಸದಾಶಯವಾಗಿದೆ. ಕರ್ನಾಟಕದ ವಿವಿಧ ಜಿಲ್ಲೆಗಳ ಚರ್ಮರೋಗ ತಜ್ಞರು, ಶಂಕಿತ ವೈದ್ಯರುಗಳ ಪಟ್ಟಿಗಳನ್ನು ಜಿಲ್ಲಾ ಅಪರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸಲ್ಲಿಸಿದರು.

# ಮಾದರಿ ಕ್ಷೇತ್ರವನ್ನಾಗಿಸಲು ಪ್ರಥಮ ಆದ್ಯತೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ–ಲಕ್ಷ್ಮೇಶ್ವರ–ಮುಂಡರಗಿ ತಾಲೂಕುಗಳನ್ನೊಳಗೊಂಡ ಶಿರಹಟ್ಟಿ ಮತಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿಸುವುದಕ್ಕೆ ಪ್ರಥಮ ಆದ್ಯತೆ ನೀಡಲಾಗುತ್ತಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ಎಸ್.ಎಂ. ಡಬಾಲಿ ತಾಲೂಕಾ ಕ್ರೀಡಾಂಗಣದಲ್ಲಿ ತಾಲೂಕಾ ಆಡಳಿತದ ವತಿಯಿಂದ ಜರುಗಿದ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಿರಹಟ್ಟಿ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ 100ಹಾಸಿಗೆ ಆಸ್ಪತ್ರೆ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಇಟಗಿ–ಸಾಸಲವಾಡ ಏತ ನೀರಾವರಿ ಪುನರಾರಂಭ, ಶೀಘ್ರದಲ್ಲಿಯೇ ಪೂರ್ಣಗೊಂಡಿರುವ ಅಗ್ನಿಶಾಮಕ ಠಾಣೆಯ ಉದ್ಘಾಟನೆ ಹೀಗೆ ಹತ್ತು ಹಲವು ಅಭಿವೃದ್ಧಿ ಕಾರ್ಯಗಳು ಕ್ಷೇತ್ರದಲ್ಲಿ ನಡೆಯುತ್ತಿದ್ದು, ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಅಭಿವೃದ್ಧಿಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಇದಕ್ಕೆ ಎಲ್ಲ ಅಧಿಕಾರಿಗಳು ಸಹಕಾರ ನೀಡಬೇಕು ಎಂದರು.

ಶಿರಹಟ್ಟಿ ತಾಲೂಕಿನಲ್ಲಿ ಅನೇಕ ಸ್ವಾತಂತ್ರ್ಯ ಹೋರಾಟಗಾರರು ಸ್ವಾತಂತ್ರ್ಯ ಚಳುವಳಿಯಲ್ಲಿ ಭಾಗಿಯಾಗಿದ್ದರು. ಇಂತಹ ಮಹನೀಯರನ್ನು ಸ್ಮರಿಸುವುದರ ಜೊತೆಗೆ ಸ್ವಾತಂತ್ರ್ಯೋತ್ಸವವನ್ನು ಎಲ್ಲರೂ ಅರ್ಥಪೂರ್ಣವಾಗಿ ಆಚರಿಸುವುದರ ಮೂಲಕ ದೇಶದ ಏಕತೆ ಮತ್ತು ಅಭಿವೃದ್ಧಿಗೆ ಕೈ ಜೋಡಿಸಬೇಕೆಂದು ಹೇಳಿದರು.

ತಹಸೀಲ್ದಾರ ಕೆ.ರಾಘವೇಂದ್ರ ರಾವ್ ಧ್ವಜಾರೋಹಣ ನೆರವೇರಿಸಿದರು. ವಿವಿಧ ಇಲಾಖೆಗಳಲ್ಲಿ ಉತ್ತಮ ಸಾಧನೆಗೈದ ಸಿಬ್ಬಂದಿಗಳಿಗೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಿಪಿಐ ನಾಗರಾಜ ಮಾಢಳ್ಳಿ, ತಾ.ಪಂ ಇಓ ಆರ್.ವಿ. ದೊಡ್ಡಮನಿ, ಪಿಎಸ್‌ಐ ಚನ್ನಯ್ಯ ದೇವೂರ, ಬಿಇಓ ನಾಣ್ಕಿನಾಯ್ಕ, ಪ.ಪಂ ಅಧ್ಯಕ್ಷೆ ದೇವಕ್ಕ ಗುಡಿಮನಿ, ಉಪಾಧ್ಯಕ್ಷೆ ನೀಲವ್ವ ಹುಬ್ಬಳ್ಳಿ, ನಾಗರಾಜ ಲಕ್ಕುಂಡಿ, ಬಿ.ಡಿ. ಪಲ್ಲೇದ, ಫಕ್ಕೀರೇಶ ರಟ್ಟಿಹಳ್ಳಿ, ಸಂದೀಪ ಕಪ್ಪತ್ತನವರ, ಹೊನ್ನಪ್ಪ ಶಿರಹಟ್ಟಿ, ಜಾನು ಲಮಾಣಿ, ವೀರಯ್ಯ ಮಠಪತಿ, ಸಿ.ಸಿ. ನೂರಶೆಟ್ಟರ, ಎಚ್.ಎಂ. ದೇವಗಿರಿ, ಪ್ರಭು ಹಲಸೂರ, ಮಂಜು ಹುಬ್ಬಳ್ಳಿ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ನವ ಭಾರತದ ನಿರ್ಮಾಣಕ್ಕಾಗಿ ಒಂದಾಗೋಣ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸ್ವತಂತ್ರ ರಾಷ್ಟ್ರಕ್ಕಾಗಿ ಸರ್ವಸ್ವವನ್ನೂ ತ್ಯಾಗ ಮಾಡಿದ ವೀರರಾಣಿ ಕಿತ್ತೂರ ಚನ್ನಮ್ಮ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನಂತಹ ಹೋರಾಟಗಾರರ, ಮಹನೀಯರ ಸ್ಮರಣೆಯೊಂದಿಗೆ ನವ ಭಾರತದ ನಿರ್ಮಾಣಕ್ಕಾಗಿ ಜಾತಿ, ಧರ್ಮ ಮೀರಿ ಎಲ್ಲರೂ ಸಹೋದರರಂತೆ ಮುನ್ನಡೆಯುವ ಸಂಕಲ್ಪದಿ ಹೆಜ್ಜೆ ಹಾಕೋಣ ಎಂದು ಕಾಂಗ್ರೆಸ್ ನಾಯಕ ಗುರುನಾಥ ದಾನಪ್ಪನವರ ಹೇಳಿದರು.

ಅವರು ಶುಕ್ರವಾರ ಸ್ವಾತಂತ್ರ್ಯೋತ್ಸವದ ನಿಮಿತ್ತ ಪಟ್ಟಣದ ಸಂಗೊಳ್ಳಿ ರಾಯಣ್ಣ ಮತ್ತು ಕಿತ್ತೂರ ರಾಣಿ ಚನ್ನಮ್ಮನ ಪುತ್ಥಳಿಗೆ ಹೂಮಾಲೆ ಸಮರ್ಪಿಸಿ ಮಾತನಾಡಿದರು.

ಬ್ರಿಟಿಷರ ದಬ್ಬಾಳಿಕೆಯ ವಿರುದ್ಧ ಜನರನ್ನು ಜಾಗೃತಗೊಳಿಸಿ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಕೀರ್ತಿ ಕಿತ್ತೂರು ರಾಣಿ ಚನ್ನಮ್ಮಳ ಭಂಟ ರಾಯಣ್ಣನವರಿಗೆ ಸಲ್ಲುತ್ತದೆ. ರಾಯಣ್ಣನ ದೇಶಭಕ್ತಿ ಎಲ್ಲರಲ್ಲಿ ಬೆಳೆದು ಬರಬೇಕು, ಅಂತಹ ದೇಶಭಕ್ತರು ಈ ನಾಡಿನಲ್ಲಿ ಜನಿಸುವಂತಾಗಬೇಕು. ವಿವಿಧತೆಯಲ್ಲಿ ಏಕತೆಯನ್ನು ಹೊಂದಿದ ಸುಸಂಸ್ಕೃತ ಭಾರತದಲ್ಲಿ ಎಲ್ಲರೂ ಹಕ್ಕುಗಳ ಪ್ರತಿಪಾದನೆಯ ಜೊತೆಗೆ ಕರ್ತವ್ಯಗಳನ್ನು ಮರೆಯದೇ ಪಾಲಿಸಬೇಕು ಎಂದರು.

ಈ ವೇಳೆ ಫಕ್ಕಿರೇಶ ಮ್ಯಾಟಣ್ಣವರ, ತಿಪ್ಪಣ್ಣ ಸಂಶಿ, ನವೀನ ಬೆಳ್ಳಟ್ಟಿ, ಈರಣ್ಣ ಪೂಜಾರ, ಬಸವರಾಜ ಹಿರೇಮನಿ, ಮಂಜು ಮುಳಗುಂದ, ಬಸವರಾಜ ಚರ್ಕಸಾಲಿ, ಸುರೇಶ ಹಟ್ಟಿ, ಭರಮಪ್ಪ ಶರಸೂರಿ, ಮುತ್ತು ಕರ್ಜೆಕಣ್ಣವರ, ನವೀನ ಕುಂಬಾರ, ಶಿವು ಒಂಟಿಪಡಿಯಪ್ಪನವರ, ಪ್ರಾಣೇಶ ವ್ಯಾಪಾರಿ, ಚಂದ್ರು ಕರ್ಜೆಕಣ್ಣವರ ಸೇರಿ ಅನೇಕರಿದ್ದರು.

### ಪುರಸಭೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಹಲವು ವಿಷಯಗಳ ಚರ್ಚೆ

# ಬೀದಿ ನಾಯಿಗಳ ಕಾಟ ತಪ್ಪಿಸಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಹರಪನಹಳ್ಳಿ ಪಟ್ಟಣದ ಅಂಬ್ಯಾನಕೆರೆಯನ್ನು ಪುನರುಜ್ಜೀವನಗೊಳಿಸಲು ಅವಶ್ಯಕ ಕಾಮಗಾರಿ ಆರಂಭಿಸಲು ವಿಸ್ತ್ರತ ಯೋಜನಾ ವರದಿಯನ್ನು ತಯಾರಿಸಲು ಕೌನ್ಸಿಲ್ ಸಭೆ ಮಂಜೂರಾತಿ ನಿರೀಕ್ಷಣೆ ಮೇರೇಗೆ ನೀಡಿರುವ ಅನುಮೋದನೆಯನ್ನು ಗುರುವಾರ ನಡೆದ ಪುರಸಭೆ ಸಾಮಾನ್ಯ ಸಭೆ ಒಪ್ಪಿಗೆ ಸೂಚಿಸಿತು.



ಹರಪನಹಳ್ಳಿ ಪಟ್ಟಣದ ಪುರಸಭೆಯಲ್ಲಿ ಗುರುವಾರ ಸಾಮಾನ್ಯ ಸಭೆಯಲ್ಲಿ ವಿವಿಧ ಕಾರ್ಯಗಳ ಬಗ್ಗೆ ಚರ್ಚಿಸಲಾಯಿತು. ಪಟ್ಟಣದ ಕೊಟ್ಟೂರು ರಸ್ತೆಯ ನಂಜನಗೌಡ ಬಡಾವಣೆಯಲ್ಲಿ ಪುರಸಭೆಯ ಕನಿಷ್ಠ 1 ಎಕರೆ ಜಾಗವಿದೆ. ಈವರೆಗೂ ವಿವಿಧ ಸಂಘ–ಸಂಸ್ಥೆಗಳಿಗೆ ಜಾಗ ನೀಡಿದ್ದೇವೆ, ಅಲ್ಲಿರುವ ಜಾಗವನ್ನು ನಮ್ಮ ಪುರಸಭೆಯ ನೌಕರರಿಗೆ ಕ್ವಾಟ್ರರ್ಸ್ ನಿರ್ಮಿಸಲು ಮೀಸಲಿಟ್ಟು ಅನುದಾನ ಒದಗಿಸಬೇಕು ಎಂದು ಹಿರಿಯ ಸದಸ್ಯ ಎಂ.ವಿ. ಅಂಜಿನಪ್ಪ ಹೇಳಿದಾಗ ಸಭೆ ಒಪ್ಪಿಗೆ ನೀಡಿತು.

ಬೀದಿ ನಾಯಿಗಳ ಕಾಟ ಪಟ್ಟಣದಲ್ಲಿ ಜಾಸ್ತಿಯಾಗಿದೆ. ಇದಕ್ಕೆ ಶೀಘ್ರವೇ ಕಡಿವಾಣ ಹಾಕಬೇಕು ಹಾಗೂ ಮಳೆಯಿಂದ ಕೋರಿಹುಳುಗಳ ಕಾಟ ಸಹ ಹೆಚ್ಚಾಗಿದೆ ಎಂದು ಸದಸ್ಯ ಜಾಕೀರ ಹುಸೇನ್ ಪ್ರಸ್ತಾಪಿಸಿದಾಗ ಮಾಜಿ ಅಧ್ಯಕ್ಷ ಮಂಜುನಾಥ ಇಜಂತಕರ್, ನಾಯಿಗಳ ಕಾಟ ತಪ್ಪಿಸಿ ಹಾಗೂ ಕೋರಿಹುಳಗಳಿಗೆ ಔಷಧಿ ಸಿಂಪಡಿಸಿ ನಾಶ ಮಾಡಿ ಎಂದು ಸಲಹೆ ನೀಡಿದರು.

ನಾಮನಿರ್ದೇಶಿತ ಸದಸ್ಯೆ ಸುಮಾ ಜಗದೀಶ, ಸದಸ್ಯ ಜಾವೇದ್ ಅಗತ್ಯ ಸಲಹೆ–ಸೂಚನೆ ನೀಡಿದರು. ಪುರಸಭೆ ಮುಖ್ಯಾಧಿಕಾರಿ ರೇಣುಕಾ ದೇಸಾಯಿ, ಪುರಸಭಾ ಅಧ್ಯಕ್ಷೆ ಎಂ. ಪಾತೀಮಾಬಿ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ವೆಂಕಟೇಶ, ಮಾಜಿ ಅಧ್ಯಕ್ಷ ಅಬ್ದುಲ್ ರಹಿಮಾನ್, ಉದ್ದಾರ ಗಣೇಶ, ವಸಂತಪ್ಪ, ಹೇಮಣ್ಣ ಮೋರಗೇರಿ, ತಾರ ಹನುಮಂತಪ್ಪ, ಶೋಭಾ, ಗೊಂಗಡಿ ನಾಗರಾಜ, ಚರ್ಚೆಯಲ್ಲಿ ಪಾಲ್ಗೊಂಡಿದ್ದರು. ಉಪಾಧ್ಯಕ್ಷ ಎಚ್. ಕೊಟ್ರೇಶ, ಇಂಜಿನಿಯರ್ ಸಿದ್ದೇಶ, ಆರೋಗ ನಿರೀಕ್ಷಕ ಮಂಜುನಾಥ ಉಪಸ್ಥಿತರಿದ್ದರು.

ಪಟ್ಟಣದ ಸುಣಗಾರಗೇರಿಯಲ್ಲಿರುವ ಎಸ್‌ಎಚ್‌ಡಿ ಶಾಲೆ ಬಳಿ ಶೌಚಾಲಯ ನಿರ್ಮಿಸಬೇಕು ಎಂದು ಸದಸ್ಯೆ ಶೋಭಾ ಒತ್ತಾಯಿಸಿದರು. ಪಟ್ಟಣದ ಪುರಸಭೆ ಬಳಿ ನಿರ್ಮಿಸುತ್ತಿರುವ ದಿನವಹಿ ಮಾರುಕಟ್ಟೆ ಕಾಮಗಾರಿ ಹಾಗೂ ಡಿವೈಡರ್ ಕಾಮಗಾರಿ ಮಂದಗತಿಯಲ್ಲಿ ಸಾಗಿದ್ದು, ಬೇಗ ಪೂರ್ಣಗೊಳಿಸಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಿ ಎಂದು ಮಾಜಿ ಅಧ್ಯಕ್ಷ ಮಂಜುನಾಥ ಇಜಂತಕರ್ ಗಮನ ಸೆಳೆದರು.

## ಸಚಿವ ಡಾ. ಎಚ್.ಕೆ. ಪಾಟೀಲ ಜನ್ಮದಿನದ ಅಂಗವಾಗಿ ಸಿಹಿ ಪ್ರಸಾದ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮಹಾತ್ಮ ಗಾಂಧಿ ವೃತ್ತದ ಬಳಿ ಇರುವ ಹಳೇ ಜಿಲ್ಲಾಸ್ಪತ್ರೆ ಆವರಣದ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರ 72ನೇ ಜನ್ಮದಿನದ ಅಂಗವಾಗಿ ಅವರ ಅಭಿಮಾನಿ ಬಳಗದವರು ಸಿಹಿಯೊಂದಿಗೆ ಪ್ರಸಾದ ಸೇವೆಯನ್ನು ಹಮ್ಮಿಕೊಂಡಿದ್ದರು. 1645ನೇ ದಿನದ ಪ್ರಸಾದ ಸೇವೆಗೆ ಸಚಿವ ಎಚ್.ಕೆ. ಪಾಟೀಲ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಪ್ರಸಾದ ನಿಲಯದ ಗೌರವಾಧ್ಯಕ್ಷ ಎಸ್.ಎಸ್. ಕಳಸಾಪೂರ, ಉಪಾಧ್ಯಕ್ಷ ಉಮೇಶ ಪೂಜಾರ, ಕಾರ್ಯದರ್ಶಿ ಮಂಜುನಾಥ ಭಗವತಿ, ಖಜಾಂಚಿ ವೆಂಕಟೇಶ ಇಮರಾಪೂರ, ಸದಸ್ಯರುಗಳಾದ ಗುರುಮೂರ್ತಿ ಮರಿಗುದ್ದಿ, ರಾಜಣ್ಣ ಮಲ್ಲಾಡದ, ಮುತ್ತು ಜಡಿ, ಸೇವಾಕರ್ತರಾದ ಕೆಂಬಾವಿಮಠ ಮುಂತಾದವರು ಉಪಸ್ಥಿತರಿದ್ದರು.

### ಡಂಬಳ ಗ್ರಾಮದ ಉರ್ದು, ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮ

## ಭವ್ಯ ಭಾರತ ಕಟ್ಟುವ ಸಂಕಲ್ಪ ಮಾಡೋಣ

■ವಿಜಯಸಾಕ್ಷಿ ಸುದ್ದಿ, ಡಂಬಳ

ಭಾರತದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರು ಪ್ರತಿಯೊಬ್ಬ ಭಾರತೀಯರ ಮನದಲ್ಲೂ ಅಮರರಾಗಿ ಉಳಿದಿದ್ದಾರೆ. ನಾವೆಲ್ಲರೂ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯೋಣ ಎಂದು ಉಪತಹಸೀಲ್ದಾರ ಎಸ್.ಎಸ್. ಬಿಚ್ಚಾಲಿ ಹೇಳಿದರು.

ಡಂಬಳ ಗ್ರಾಮದ 7, 8ನೇ ತರಗತಿ ಉರ್ದು ಶಾಲೆ ಮತ್ತು 1ರಿಂದ 6ರವರೆಗಿನ ಆಂಗ್ಲ ಮಾಧ್ಯಮ ಶಾಲೆಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿ, ಜಾತಿ, ಧರ್ಮ, ಭೇದ-ಭಾವ ಹೊಂದದೆ ಎಲ್ಲರೂ ಸಮಾನರಾಗಿ ಶಾಂತಿಯಿಂದ ಬಾಳೋಣ. ದೇಶಪ್ರೇಮ ಬೆಳೆಸಿಕೊಳ್ಳಲು ಪ್ರೇರಣೆಯಾದ ಈ ದಿನದಂದು ಸಮ ಸಮಾಜ ಕಟ್ಟಲು ಸಂಕಲ್ಪ ಮಾಡೋಣ ಎಂದರು.

ಅಂಜುಮನ್ ಅಧ್ಯಕ್ಷ ಬಸೀರಹಮ್ಮದ ತಾಂಬೋಟಿ, ಬುಡ್ನೆಸಾಬ ಅತ್ತಾರ, ಹುಸೇನಸಾಬ ಹೊಸಬಾವಿ ಮಾತನಾಡಿ, ಮಹಾನ್ ಸ್ವಾತಂತ್ರ್ಯ ಸೇನಾನಿಗಳಾದ



ಮಹಾತ್ಮ ಗಾಂಧೀಜಿ, ಜವಾಹರಲಾಲ್ ನೆಹರು, ಸುಭಾಷ್ ಚಂದ್ರ ಬೋಸ್, ಭಗತ್ ಸಿಂಗ್, ಸರ್ದಾರ್ ವಲ್ಲಭಭಾಯಿ ಪಟೇಲ್ ಮುಂತಾದವರ ಹೋರಾಟದಿಂದ ನಮಗೆ ಸ್ವಾತಂತ್ರ್ಯ ಸಿಕ್ಕಿದೆ. ಡಾ.ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನವನ್ನು ನಾವು ಗೌರವದಿಂದ ನೆನೆಸಿಕೊಳ್ಳಬೇಕು. ಅವರ ತ್ಯಾಗದಿಂದಲೇ ಇಂದು ನಾವು ಸ್ವತಂತ್ರ ಭಾರತದಲ್ಲಿ ಉಸಿರಾಡುತ್ತಿದ್ದೇವೆ.

ಸ್ವಾತಂತ್ರ್ಯ ದಿನವು ಕೇವಲ ಆಚರಣೆಯ ದಿನವಲ್ಲ. ಅದು ನಮ್ಮ ದೇಶದ ಕಡೆಗಿನ ಜವಾಬ್ದಾರಿಗಳನ್ನು ನೆನಪಿಸುವ ದಿನವೂ ಹೌದು. ನಮ್ಮ ಕರ್ತವ್ಯ ದೇಶದ ಏಕತೆ, ಪ್ರಗತಿ ಮತ್ತು ಶಾಂತಿಗಾಗಿ ಶ್ರಮಿಸುವುದು. ನಾವೆಲ್ಲರೂ ದೇಶಭಕ್ತಿಯಿಂದ ಭಾರತವನ್ನು ಮತ್ತಷ್ಟು ಶಕ್ತಿಶಾಲಿಯಾಗಿ ನಿರ್ಮಿಸಬೇಕಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ವಿವಿಧ ದೇಶಪ್ರೇಮ ಮೂಡಿಸುವ ದೇಶ ಭಕ್ತಿಗೀತೆಗಳಿಗೆ ನೃತ್ಯ ಮಾಡಿದರು. ಕಾರ್ಯಕ್ರಮದಲ್ಲಿ ಕಂದಾಯ ನಿರೀಕ್ಷಕ ಪ್ರಭು ಬಾಗಲಿ, ಎಮ್.ಎಮ್. ವಿಭೂತಿ, ಗ್ರಾಮ ಆಡಳಿತಾಧಿಕಾರಿಗಳು, ಗ್ರಾ.ಪಂ ಸದಸ್ಯ ಪೀರಖಾನ ಹೊಸಪೇಟಿ, ಎಸ್‌ಡಿಎಮ್‌ಸಿ ಅಧ್ಯಕ್ಷ ಎಮ್.ಜೆ. ಕಾಸ್ತಾರ, ಖಾಜಾಹುಸೇನ ಹೊಸಪೇಟಿ, ಮೈನುದ್ದಿನ ಆಲೂರ, ಖಾದರಸಾಬ ಬಾಗಲಿ, ಮರ್ದಾನಸಾಬ ಹೊಂಬಳ, ಬುಡ್ನೆಸಾಬ ಮೂಲಿಮನಿ, ಶಿಕ್ಷಕರಾದ ಡಿ.ಕೆ. ಹೊಳೆಮ್ಮನವರ, ಹಸೀನಾ, ಸುಸನ್ನಾ ಕನವಳ್ಳಿ, ನೂಸರಹತ್ತ ಸೇಕ, ಹಸೀನಾ ಹೊಸಪೇಟಿ, ತಸಲೀಮ್ ಪಟವಾರಿ ಸೇರಿದಂತೆ ಶಾಲಾ ಸಿಬ್ಬಂದಿಗಳು, ಯುವಕರು ವಿದ್ಯಾರ್ಥಿಗಳು ಇದ್ದರು.

> ಸಕಲ ಜಾತಿ, ಧರ್ಮ, ಭಾಷೆ, ಪ್ರದೇಶಗಳ ಜನರೆಲ್ಲ ಒಗ್ಗಟ್ಟಾಗಿ ಬೃಹತ್ ಪ್ರಜಾಪ್ರಭುತ್ವದ ಯಶಸ್ಸಿಗಾಗಿ ನಾವೆಲ್ಲರೂ ಸಾಮರಸ್ಯದಿಂದ ಬಾಳುತ್ತಿದ್ದೇವೆ. ಬಹುಜನರ ಒಳಿತಿಗಾಗಿ, ಬಹುಜನರ ಕಲ್ಯಾಣಕ್ಕಾಗಿ ಎಂಬ ಮಂತ್ರವನ್ನು ಸಾರುತ್ತಾ ಭವ್ಯ ಭಾರತ ಕಟ್ಟುವ ಸಂಕಲ್ಪ ಮಾಡೋಣ ಎಂದು ಉಪತಹಸೀಲ್ದಾರ ಎಸ್.ಎಸ್. ಬಿಚ್ಚಾಲಿ ಕರೆ ನೀಡಿದರು.

## ಆರೋಗ್ಯಯುತ ಸಮಾಜ ನಿರ್ಮಾಣಕ್ಕೆ ಸಹಕರಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತವಿಂದು ಎಲ್ಲ ಕ್ಷೇತ್ರಗಳಲ್ಲಿ ಗಣನೀಯ ಪ್ರಗತಿ ಸಾಧಿಸಿದ್ದರೂ ಸಹ ಹೆಚ್ಚುತ್ತಿರುವ ಜನಸಂಖ್ಯೆಯಿಂದ ಹತ್ತಾರು ಸಮಸ್ಯೆಗಳು ಕಾಡುತ್ತಿವೆ. ಸ್ವಾತಂತ್ರ್ಯೋತ್ಸವದ ಸಂಭ್ರಮದ ಸುವರ್ಣ ಘಳಿಗೆಯಲ್ಲಿ ದೇಶದ ಪ್ರತಿಯೊಬ್ಬ ನಾಗರಿಕರು ಸ್ವಚ್ಛತೆ, ಆರೋಗ್ಯಯುತ ಸಮಾಜದ ನಿರ್ಮಾಣಕ್ಕಾಗಿ ಸಹಕರಿಸಬೇಕಾಗಿದೆ ಎಂದು ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ಹೇಳಿದರು.

ಅವರು ಪುರಸಭೆಯ ಆವರಣದಲ್ಲಿ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ದ್ವಜಾರೋಹಣ ನೆರವೇರಿಸಿ ಮಾತನಾಡಿ, ಬೆಳೆಯುತ್ತಿರುವ ಪಟ್ಟಣದ ಜನತೆಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವಲ್ಲಿ ಪ್ರಾಮಾಣಿಕ ಪ್ರಯತ್ನ, ಸೇವೆ ಮಾಡಲಾಗುತ್ತಿದೆ. ಅದಕ್ಕೆ ಸರ್ಕಾರದಿಂದ ಹೆಚ್ಚಿನ ನೆರವು ಅಗತ್ಯವಿದೆ. ಪೌರ ಕಾರ್ಮಿಕರ ಕೊರತೆಯಿಂದ ಪಟ್ಟಣದ ಸ್ವಚ್ಛತೆ ಸಮಸ್ಯೆ ಹೆಚ್ಚುತ್ತಿದ್ದು, ಸಾರ್ವಜನಿಕರು ಸಹಕರಿಸುವಂತೆ ಮನವಿ ಮಾಡಿದರು.

ಪುರಸಭೆಯ ಉಪಾಧ್ಯಕ್ಷ ಫಿರ್ದೋಸ್ ಆಡೂರ, ಸದಸ್ಯರಾದ ಪ್ರವೀಣ ಬಾಳಿಕಾಯಿ, ಮಹೇಶ ಹೊಗೆಸೊಪ್ಪಿನ, ಜಯಮ್ಮ ಅಂದಲಗಿ, ಜಯಮ್ಮ ಕಳ್ಳಿ, ಎಸ್.ಕೆ. ಹವಾಲ್ದಾರ, ರಾಜಣ್ಣ ಕುಂಬಿ ಮಾತನಾಡಿದರು.

ಪುರಸಭೆ ನಿ.ಪೌರ ಕಾರ್ಮಿಕರು, ಪುರಸಭೆಯ ಶಿಕ್ಷಣ ಸಂಸ್ಥೆಯ ನಿವೃತ್ತ ನೌಕರರರು, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರು, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸಭೆಯಿಂದ ಸನ್ಮಾನಿಸಲಾಯಿತು. ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಪ್ರಾಸ್ತಾವಿಕ ನುಡಿದರು. ಪುರಸಭೆಯ ಸದಸ್ಯರು, ಸಿಬ್ಬಂದಿ, ಪುರಸಭೆಯ ಅಂಗ ಶಿಕ್ಷಣ ಸಂಸ್ಥೆಯ ಶಿಕ್ಷಕರು, ವಿದ್ಯಾರ್ಥಿಗಳು, ಪೌರ ಕಾರ್ಮಿಕರು ಇದ್ದರು. ಹನಮಂತ ನಂದೆಣ್ಣವರ ನಿರೂಪಿಸಿದರು.

### ನರೇಗಲ್ಲ ಹೋಬಳಿಯಾದ್ಯಂತ ಸಡಗರ, ಸಂಭ್ರಮದ ಸ್ವಾತಂತ್ರ್ಯೋತ್ಸವ

## ಭಾರತ ಸ್ವಾವಲಂಬನೆಯತ್ತ ಹೆಜ್ಜೆ ಇಡುತ್ತಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಸೇರಿದಂತೆ ಹೋಬಳಿಯಾದ್ಯಂತ ಶುಕ್ರವಾರ 79ನೇ ಸ್ವಾತಂತ್ರ್ಯೋತ್ಸವವನ್ನು ಸಡಗರ, ಸಂಭ್ರಮದಿಂದ ಆಚರಿಸಲಾಯಿತು. ಶಾಲಾ-ಕಾಲೇಜು ಸೇರಿದಂತೆ ಬ್ಯಾಂಕ್, ಸರ್ಕಾರಿ ಕಛೇರಿ ಹಾಗೂ ಸಂಘ ಸಂಸ್ಥೆಗಳಲ್ಲಿ ಧ್ವಜಾರೋಹಣ ನೆರವೇರಿಸಲಾಯಿತು.

ಸ್ಥಳೀಯ ಪಟ್ಟಣ ಪಂಚಾಯಿತಿಯಲ್ಲಿ ನಡೆದ ಸಮಾರಂಭದಲ್ಲಿ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಇಂದು ಸ್ವಾತಂತ್ರ್ಯಕ್ಕಾಗಿ ತ್ಯಾಗ, ಬಲಿದಾನ ಮಾಡಿದ ಮಹನೀಯರನ್ನು ಸ್ಮರಿಸುವ ದಿನವಾಗಿದೆ. ನಮಗೆ ದೊರೆತಿರುವ ಸ್ವಾತಂತ್ರ್ಯದಿಂದ ಭಾರತ ಹತ್ತು ಹಲವಾರು ಸಮಸ್ಯೆಗಳ ಮಧ್ಯೆಯೂ ಸ್ವಾವಲಂಬನೆಯತ್ತ ಹೆಜ್ಜೆ ಇಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಸಾರ್ವಜನಿಕ ಗ್ರಂಥಾಲಯದಲ್ಲಿ ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ



ಕೋರಧಾನ್ಯಮಠ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಭಾರತಾಂಬೆಯನ್ನು ಸ್ವತಂತ್ರಗೊಳಿಸಲು ಮಡಿದ ಅನೇಕ ಮಹನೀಯರು ತಮ್ಮ ವೈಯಕ್ತಿಕ ಜೀವನದ ಕಡೆಗೆ ಎಳ್ಳಷ್ಟೂ ಗಮನ ಹರಿಸಲಿಲ್ಲ. ದೇಶ ಮುಖ್ಯ ಎಂದುಕೊಂಡು ಹೋರಾಡಿ ಮಡಿದ ಮಹನೀಯರು ನಮಗೆ ಆದರ್ಶರಾಗಿದ್ದಾರೆ. ಅವರ ಆದರ್ಶಗಳನ್ನು ಜೀವನದಲ್ಲಿ ಕಿಂಚಿತ್ತಾದರೂ ಅಳವಡಿಸಿಕೊಳ್ಳಲು ನಾವಿಂದು ಪ್ರತಿಜ್ಞೆ ಮಾಡೋಣ ಎಂದರು. ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ, ಶ್ರೀಶೈಲಪ್ಪ ಬಂಡಿಹಾಳ, ವೀರಪ್ಪ ಜೋಗಿ, ಮಲ್ಲಿಕಾರ್ಜುನಗೌಡ ಭೂಮನಗೌಡ್ರ, ಜ್ಯೋತಿ ಪಾಯಪ್ಪಗೌಡ್ರ, ಫಕೀರಪ್ಪ ಬಮಲಾಪೂರ, ರಾಚಯ್ಯ ಮಾಲಗಿತ್ತಿಮಠ, ದಾವೂದಲಿ ಕುದರಿ, ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಆರೀಫ್ ಮಿರ್ಜಾ, ಪ.ಪಂ ಸದಸ್ಯರು, ಸಿಬ್ಬಂದಿ ಹಾಗೂ ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಿಬ್ಬಂದಿಗಳಿದ್ದರು.

ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಸ್ವಾತಂತ್ರ್ಯೋತ್ಸವದ ಅಂಗವಾಗಿ ಕೃಷಿ ಅಧಿಕಾರಿ ಬಸವರಾಜ ಗದಗಿನ ಧ್ವಜಾರೋಹಣ ನೆರವೇರಿಸಿದರು. ಸಿಬ್ಬಂದಿಗಳಾದ ಬಾಬು ರಾಜೂರ, ಅನ್ನಪೂರ್ಣ, ಶಿವಮ್ಮ ಕುಷ್ಟಗಿ, ಬಸವರಾಜ ರೊಟ್ಟಿ, ಸಿದ್ದು ಸೊಲಗಿ ಇದ್ದರು. ಪಟ್ಟಣದ ಕೆ.ಜಿ.ಎಂ.ಎಸ್ ಶಾಲೆಯಲ್ಲಿ ಶುಕ್ರವಾರ ಸ್ವಾತಂತ್ರ್ಯೋತ್ಸವದ ಅಂಗವಾಗಿ ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ ಧ್ವಜಾರೋಹಣ ನೆರವೇರಿಸಿದರು. ಮುಖ್ಯ ಶಿಕ್ಷಕ ಬಿ.ಬಿ. ಕುರಿ, ಎನ್.ಎಲ್. ಚೌಹಾನ್, ಎಂ.ಪಿ. ಅಣಗೌಡರ್, ಎಸ್.ಐ. ಜಗಾಪೂರ, ರೇಣುಕಾ ಹೊಸಳ್ಳಿ, ಜೆ.ಎ. ಪಾಟೀಲ, ಎಂ.ಎಸ್. ಮಾಳಶೆಟ್ಟಿ, ಡಿ.ವಿ ಕಳ್ಳಿ ಇದ್ದರು.

ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಯಿತು. ಶಾಲೆಯ ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ ಸ್ವಾತಂತ್ರ್ಯ ದಿನಾಚರಣೆಯ ಕುರಿತು ಮಾತನಾಡಿದರು. ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

> ಉಪ ತಹಸೀಲ್ದಾರ ಕಚೇರಿಯಲ್ಲಿ ಉಪ ತಹಸೀಲ್ದಾರ ಶಂಕ್ರಪ್ಪ ದೊಡ್ಡಮನಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಭಾರತಕ್ಕೆ ಸ್ವಾತಂತ್ರ್ಯ ಬಂದು 79 ವರ್ಷಗಳು ಪೂರ್ಣಗೊಂಡಿದ್ದು, ನಮ್ಮ ದೇಶವು ಜಗತ್ತಿನ ಎಲ್ಲ ರಾಷ್ಟ್ರಗಳಿಗಿಂತ ಒಂದು ಹೆಜ್ಜೆ ಮುಂದು ಎಂಬ ರೀತಿಯಲ್ಲಿ ಬೆಳೆಯುತ್ತಿದೆ ಎಂದು ಹೇಳಿದರು. ಗ್ರಾಮ ಆಡಳಿತಾಧಿಕಾರಿ ದಾವಲ ಇಟಗಿ, ಸಂಗಮೇಶ ಕಡಗದ, ಸಂಗಮೇಶ ಮಾದರ, ಸುಧಾ ಕುರಡಗಿ, ಕಳಕಪ್ಪ ತಳವಾರ, ಹನುಮಂತ ತಳವಾರ, ದ್ರಾಕ್ಷಾಯಣಿ ಶಾಂತಗೇರಿ ಸೇರಿದಂತೆ ಸಿಬ್ಬಂದಿ ಇದ್ದರು.

### ಅಮೃತ ಸರೋವರ ದಂಡೆಯ ಮೇಲೆ ಸ್ವಾತಂತ್ರ್ಯ ದಿನಾಚರಣೆ ಸಂಭ್ರಮ

## ದೇಶದ ಭದ್ರತೆಗಾಗಿ ನಾವೆಲ್ಲ ಶ್ರಮಿಸಬೇಕು

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ತಾಲೂಕಿನ ಮಾರನಬಸರಿ, ಗೋಗೇರಿ ಮತ್ತು ಮುಶಿಗೇರಿ ಗ್ರಾ.ಪಂ ವ್ಯಾಪ್ತಿಯ ಅಮೃತ ಸರೋವರದ ದಂಡೆಯ ಮೇಲೆ ಸಂಭ್ರಮದಿಂದ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಲಾಯಿತು.

ಮಾರನಬಸರಿ ಅಮೃತ ಸರೋವರದ ದಂಡೆಯ ಮೇಲಿನ ಧ್ವಜಾರೋಹಣ ಕಾರ್ಯಕ್ರಮ ಗಮನಸೆಳೆಯಿತು. ದೂರದ ಪಶ್ಚಿಮ ಬಂಗಾಳದಲ್ಲಿ ಭಾರತ-ಬಾಂಗ್ಲಾ ಗಡಿಯಲ್ಲಿ ಬಿಎಸ್‌ಎಫ್ ಯೋಧರಾಗಿ ಕರ್ತವ್ಯ ನಿರ್ವಹಿಸುತ್ತಿರುವ ತಾಲೂಕಿನ ಬೂದಿಹಾಳ ಗ್ರಾಮದ ಯೋಧೆ ಸಾವಿತ್ರಿ ಮುತ್ತಪ್ಪ ಚಿಗರಿ ಅವರು ಅಮೃತ ಸರೋವರ ದಂಡೆಯ ಮೇಲೆ 79ನೇ ಸ್ವಾತಂತ್ರ್ಯ ದಿನಾಚರಣೆಯ



ಧ್ವಜಾರೋಹಣ ನೆರವೇರಿಸಿದ್ದು ವಿಶೇಷವಾಗಿತ್ತು. ಬಿ.ಎ ಪದವಿ ಪಡೆದಿರುವ ಯೋಧೆ ಸಾವಿತ್ರಿ ಅವರು ಕಳೆದ 12 ವರ್ಷಗಳಿಂದ ಬಾಂಗ್ಲಾ ಗಡಿಯಲ್ಲಿ ಕೆಲಸ ಮಾಡುತ್ತಿದ್ದು, ಧ್ವಜಾರೋಹಣಕ್ಕಾಗಿ ಸ್ವಗ್ರಾಮ ಬೂದಿಹಾಳಕ್ಕೆ ಬಂದು ಮಾರನಬಸರಿ ಗ್ರಾ.ಪಂ ಆಯೋಜಿಸುವ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಕಳೆದ ಎರಡು ವರ್ಷಗಳಿಂದ ಧ್ವಜಾರೋಹಣ ನೆರವೇರಿಸುತ್ತಿದ್ದಾರೆ.

ಧ್ವಜಾರೋಹಣದ ಬಳಿಕ ಮಾತನಾಡಿದ ಯೋಧೆ ಸಾವಿತ್ರಿ, ದೇಶದ ಭದ್ರತೆಗಾಗಿ ನಾವೆಲ್ಲ ಶ್ರಮಿಸಬೇಕು. ದೇಶ ಸುಭದ್ರವಾಗಿದ್ದರೆ ನಾವೆಲ್ಲ ನಮ್ಮ ಮನೆಗಳಲ್ಲಿ ಸ್ವಚ್ಛಂದವಾಗಿರಲು ಸಾಧ್ಯ. ಮಾರನಬಸರಿ ಗ್ರಾ.ಪಂ ಸಿಬ್ಬಂದಿ ನನ್ನನ್ನು ಗುರುತಿಸಿ ಧ್ವಜಾರೋಹಣಕ್ಕೆ ಪ್ರತಿ ವರ್ಷ ಆಹ್ವಾನಿಸುತ್ತಿರುವುದು ಸಂತಸ ತಂದಿದೆ ಎಂದರು. ಆಪರೇಷನ್ ಸಿಂದೂರ ಕಾರ್ಯಾಚರಣೆಯಲ್ಲಿ ಮಹಿಳಾ ಸೈನಿಕರ ಪರಾಕ್ರಮ ನೆನಪು ಮಾಡಿಕೊಂಡ ಯೋಧೆ ಸಾವಿತ್ರಿ, ದೇಶಕ್ಕಾಗಿ ಇನ್ನೂ 8 ವರ್ಷ ಸೈನಿಕರಾಗಿ ಸೇವೆ ಸಲ್ಲಿಸುವ ಅಭಿಲಾಷೆ ಹೊಂದಿದ್ದೇನೆ ಎಂದರು.

ಕಾರ್ಯಕ್ರಮದಲ್ಲಿ ಮೂರು ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಮಂಜುನಾಥ ಮೇಟಿ, ಶರಣಪ್ಪ ನರೇಗಲ್, ಎಸ್.ಆರ್. ಸಂಕನೂರ, ಗ್ರಾಮದ ಹಿರಿಯರು, ಶಾಲಾ ಮಕ್ಕಳು, ಮುಖ್ಯೋಪಾಧ್ಯಾಯರು, ಗ್ರಾ.ಪಂ ಮತ್ತು ನರೇಗಾ ಸಿಬ್ಬಂದಿ ವರ್ಗದವರಿದ್ದರು.

> ಯೋಧೆ ಸಾವಿತ್ರಿ ಮುತ್ತಪ್ಪ ಚಿಗರಿ ಅವರಿಗೆ ಗ್ರಾ.ಪಂ ವ್ಯಾಪ್ತಿಯ ಮಾಜಿ ಸೈನಿಕರಾದ ವಿರೂಪಾಕ್ಷಪ್ಪ ಭಜಂತ್ರಿ, ರುದ್ರಪ್ಪ ಹಲಗೇರಿ, ಕಳಕವ್ವ ಹೊಸಮನಿ, ಶಿವಶರಣಪ್ಪ ಅಬ್ಬಿಗೇರಿ, ದಿವಂಗತ ಆನಂದ ಗುತ್ಯಪ್ಪನವರ ಪತ್ನಿ ಶೋಭಾ ಗುತ್ಯಪ್ಪನವರ ಸಾಥ್ ನೀಡಿದರು.

## ಮನೋರಮಾ ಕಾಲೇಜಿನಲ್ಲಿ 79ನೇ ಸ್ವಾತಂತ್ರ್ಯೋತ್ಸವ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಕಾಲೇಜಿನಲ್ಲಿ 79ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ ನೆರವೇರಿಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ, ದೇಶದ ಸ್ವಾತಂತ್ರ್ಯಕ್ಕಾಗಿ ಅನೇಕ ನಾಯಕರ ಕೊಡುಗೆಯಿದೆ. ರಾಷ್ಟ್ರದ ಪ್ರಗತಿಯಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದೆ ಎಂದರು.

ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ಇಂದಿನ ಯುವಕರೇ ಮುಂದಿನ ನಾಯಕರು. ಆದ್ದರಿಂದ ಯುವಕರು ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು ರಾಷ್ಟ್ರಭಕ್ತಿ, ದೇಶ ಪ್ರೇಮ ಹೆಚ್ಚಿಸಿಕೊಂಡು ಉತ್ತಮ ಪ್ರಜೆಗಳಾಗಿ ಬಾಳಿ ಎಂದರು.

ಸಂಸ್ಥೆಯ ಆಡಳಿತಾಧಿಕಾರಿ ಕಿಶೋರ ಮುದಗಲ್ ಮಾತನಾಡಿದರು. ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ನಿರ್ದೇಶಕರಾದ ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಬಿ.ಸಿ.ಎ ಸಂಯೋಜಕರಾದ ಪ್ರೊ. ಸವಿತಾ ಪೂಜಾರ, ಪಿ.ಯು.ಸಿ ಸಂಯೋಜಕರಾದ ಪ್ರೊ. ಶಾಹಿದಾ ಶಿರಹಟ್ಟಿ, ಪ್ರೊ. ಆರತಿ ಗೌಡರ, ಪ್ರೊ. ಕುಸುಮ, ದೈಹಿಕ ನಿರ್ದೇಶಕರಾದ ಖಯೂಮ ನವಲೂರ ಇದ್ದರು. ಪ್ರೊ. ಸಂಗಮೇಶ ಹಾದಿಮನಿ ಸ್ವಾಗತಿಸಿದರು.



ಗದಗ: ವಿಕಲಚೇತನ ಅರ್ಹ ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಸ್ವಾತಂತ್ರ್ಯೋತ್ಸವ ದಿನದಂದು ವಿತರಿಸಿದರು. ಈ ವೇಳೆ ಡಿಸಿ ಸಿ.ಎನ್.ಶ್ರೀಧರ್, ಜಿ.ಪಂ.ಸಿ.ಇಓ ಭರತ್ ಎಸ್, ಎಸ್‌ಪಿ ರೋಹನ್ ಜಗದೀಶ್, ಡಿಸಿಎಫ್ ಸಂತೋಷ ಕುಮಾರ್ ಸೇರಿದಂತೆ ಇತರರು ಇದ್ದರು. ಗದಗ: ವಿಕಲಚೇತನ ಅರ್ಹ ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಸ್ವಾತಂತ್ರ್ಯೋತ್ಸವ ದಿನದಂದು ವಿತರಿಸಿದರು. ಈ ವೇಳೆ ಡಿಸಿ ಸಿ.ಎನ್.ಶ್ರೀಧರ್, ಜಿ.ಪಂ.ಸಿ.ಇಓ ಭರತ್ ಎಸ್, ಎಸ್‌ಪಿ ರೋಹನ್ ಜಗದೀಶ್, ಡಿಸಿಎಫ್ ಸಂತೋಷ ಕುಮಾರ್ ಸೇರಿದಂತೆ ಇತರರು ಇದ್ದರು.

## ಅಮೂಲ್ಯ ಜೀವ ಉಳಿಸಲು ರಕ್ತದಾನ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ತುರ್ತು ಸಂದರ್ಭಗಳಲ್ಲಿ ಅಗತ್ಯವಿರುವ ವ್ಯಕ್ತಿಗೆ ರಕ್ತ ನೀಡಿದಾಗ ಒಂದು ಅಮೂಲ್ಯ ಜೀವ ಉಳಿಸಿದಂತಾಗುತ್ತದೆ. ಹೀಗಾಗಿ ರಕ್ತದಾನ ಶ್ರೇಷ್ಠವಾದ ದಾನವಾಗಿದೆ ಎಂದು ಬಿಜೆಪಿ ರೋಣ ಮಂಡಲ ಮಾಜಿ ಅಧ್ಯಕ್ಷ ಮುತ್ತಣ್ಣ ಕಡಗದ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ 283ನೇ ಅಂಗನವಾಡಿ ಕೇಂದ್ರದಲ್ಲಿ ಸ್ಥಳೀಯ ಶ್ರೀ ಸ್ವಾಮಿ ವಿವೇಕಾನಂದ ಯುವ ಸೇವಾ ಸಂಘ ಹಾಗೂ ಗದಗ ಶ್ರೀ ಬಸವೇಶ್ವರ ರಕ್ತ ಭಂಡಾರ ಇವರ ಸಹಭಾಗಿತ್ವದೊಂದಿಗೆ



ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಆಯೋಜಿಸಲಾಗಿದ್ದ ರಕ್ತದಾನ ಶಿಬಿರದಲ್ಲಿ ಪಾಲ್ಗೊಂಡು ಮಾತನಾಡಿದರು.

ಗದಗ ಚೈತನ್ಯ ನಗರ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸುನೀಲ ಕತ್ತಿ ಮಾತನಾಡಿ, ಎಚ್‌ಐವಿ ರೋಗ ಹೇಗೆ ಬರುತ್ತದೆ ಮತ್ತು ಅದನ್ನು ತಡೆಗಟ್ಟುವ ವಿಧಾನಗಳ ಕುರಿತು ತಿಳಿಸಿದರು. ರೋಣ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ, ಗ್ರಾ.ಪಂ ಸದಸ್ಯ ರಮೇಶ ಪಲ್ಲೇದ ಶಿಬಿರವನ್ನು ಉದ್ಘಾಟಿಸಿದರು. ನ್ಯಾಯವಾದಿ ವಿದ್ಯಾಧರ ಶಿರಗುಂಪಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರಕ್ತದಾನಿಗಳಿಗೆ ಸ್ಮರಣಿಕೆ ಹಾಗೂ ಪ್ರಶಂಸನಾ ಪತ್ರ ವಿತರಿಸಲಾಯಿತು. ಗದಗ ಬಸವೇಶ್ವರ ಬ್ಲಡ್ ಬ್ಯಾಂಕ್ ಆಡಳಿತಾಧಿಕಾರಿ ಅನಿಲಕುಮಾರ ಹಂದ್ರಾಳ, ವ್ಯವಸ್ಥಾಪಕ ಸುಭಾಸ ಕಾಲವಾಡ, ಉಮೇಶ ಮೇಟಿ, ವೀರಭದ್ರಪ್ಪ ಗಾಣಿಗೇರ, ಮುತ್ತಣ್ಣ ಪಾಟೀಲ, ಮಿಥುನ್ ಗಾಣಿಗೇರ ಸೇರಿದಂತೆ ಇನ್ನಿತರರು ಇದ್ದರು. ಶಿಬಿರದಲ್ಲಿ 64 ಜನ ರಕ್ತದಾನ ಮಾಡಿದರು.

# ಹಾಲಗೊಂಡ ಬಸವೇಶ್ವರ ರಥೋತ್ಸವ ನಾಳೆ




■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕಲ್ಯಾಣ ಚಾಲುಕ್ಯ ಅರಸರ ಕಾಲದಲ್ಲಿ ನಿರ್ಮಿಸಲಾದ ಇಲ್ಲಿಯ ಐತಿಹಾಸಿಕ ಹಾಲಗೊಂಡ ಬಸವೇಶ್ವರ ದೇವಸ್ಥಾನದ ರಥೋತ್ಸವವು ಆಗಸ್ಟ್ 18ರಂದು ಜರುಗಲಿದೆ.

ಸಂಜೆ 4 ಗಂಟೆಗೆ ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ಅಡ್ನೂರು ಗ್ರಾಮದ ಬೃಹನ್ಮಠದ ಪಂಚಾಕ್ಷರ ಶಿವಾಚಾರ್ಯ ಶ್ರೀಗಳು ರಥೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಇದಕ್ಕೂ ಪೂರ್ವ ಬಸವೇಶ್ವರ ಮೂರ್ತಿಗೆ ವಿಶೇಷ ಪೂಜೆ ನೆರವೇರಲಿದೆ. ನಂತರ ಮಹಾ ಮೃತ್ಯುಂಜಯ ಹೋಮ ನಡೆಯುವುದು. ಮುಂಜಾನೆ 9ರಿಂದ ಸಂಜೆ 4ರವರೆಗೂ 14 ಭಜನಾ ಸಂಘಗಳಿಂದ ನಾಡಿನ ವಿವಿಧ ಶರಣರ ಭಾವಚಿತ್ರ ಮೆರವಣಿಗೆ, ದೇವಸ್ಥಾನದ ಆವರಣದಲ್ಲಿ ಅನ್ನ ಸಂತರ್ಪಣೆ ನಡೆಯಲಿದೆ.

ಆ.19ರಂದು ಲಘು ರಥೋತ್ಸವ, ಆ.20ರಿಂದ 3 ದಿನಗಳ ಕಾಲ ಬಯಲು ಕುಸ್ತಿ ಸ್ಪರ್ಧೆಗಳು ಜರುಗಲಿವೆ ಎಂದು ಜಾತ್ರಾ ಸಮಿತಿಯ ಪ್ರಕಟಣೆ ತಿಳಿಸಿದೆ.

### ಮಲ ತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಸದಸ್ಯರು ವಾರ್ಡ್‌ಗಳ ಅಭಿವೃದ್ಧಿಗೆ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಎಲ್ಲ 23 ವಾರ್ಡ್‌ಗಳ ರಸ್ತೆ ಸುಧಾರಣೆಗೆ 4 ಕೋಟಿ ರೂ ಮತ್ತು ಜಕ್ಕಲಿ ರಸ್ತೆಯಲ್ಲಿನ ರಾಜಕಾಲುವೆ ನಿರ್ಮಾಣಕ್ಕಾಗಿ 1 ಕೋಟಿ ರೂ ಅನುದಾನವನ್ನು ಒದಗಿಸಲಾಗಿದ್ದು, ಸರ್ವ ಸದಸ್ಯರು ವಾರ್ಡ್‌ಗಳ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಅಬ್ಬಿಗೇರಿ ರಸ್ತೆಯಲ್ಲಿರುವ ಪುರಸಭೆಯ ಕಸ ವಿಲೇವಾರಿ ಘಟಕದ ಬಳಿ 3 ಕೋಟಿ 12 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಮಲ ತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಜೆಜೆಎಂ ಕಾಮಗಾರಿಯಿಂದ ಪಟ್ಟಣದ ಅನೇಕ ವಾರ್ಡ್‌ಗಳಲ್ಲಿನ ರಸ್ತೆಗಳು ಕಿತ್ತುಹೋಗಿದ್ದು, ಅವುಗಳನ್ನು ಸರಿಪಡಿಸಲು 4 ಕೋಟಿ ರೂ ಅನುದಾನವನ್ನು ಒದಗಿಸಲಾಗಿದೆ. ಅಲ್ಲದೆ, ಪಟ್ಟಣದ ಸೌಂದರ್ಯವನ್ನು ಹೆಚ್ಚಿಸಲು ಅನೇಕ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಪಟ್ಟಣದ ಅಬಿವೃದ್ಧಿಯ ದೃಷ್ಟಿಯಿಂದ ಸಾರ್ವಜನಿಕರೂ ಸಹ



ಕೈಜೋಡಿಸಬೇಕು. ಮುಖ್ಯವಾಗಿ ವಾರ್ಡ್‌ಗಳ ಸದಸ್ಯರು ವಾರ್ಡ್‌ಗಳಲ್ಲಿನ ಸ್ವಚ್ಛತೆಗೆ ಹೆಚ್ಚಿನ ಗಮನ ನೀಡಬೇಕು ಎಂದರು.

ಪಟ್ಟಣದ ಜನತೆ ಮಲ ಸಂಸ್ಕರಣಾ ವಾಹನಗಳ ಮೂಲಕ ಹಳ್ಳ-ಕೊಳ್ಳಗಳಲ್ಲಿ ಹರಿದು ಬಿಡುತ್ತಿದ್ದರು. ಇನ್ನುಂದೆ ಹಾಗೆ ಆಗದು. ತ್ಯಾಜ್ಯವನ್ನು ವಾಹನಗಳ ಮೂಲಕ ಮಲ ಸಂಸ್ಕರಣಾ ಘಟಕಕ್ಕೆ ಸಾಗಿಸಬೇಕು. ಇದರಿಂದ ನಾಗರಿಕ ಸಮುದಾಯ ಆರೋಗ್ಯದ ದೃಷ್ಟಿಯಿಂದಲೂ ಅನುಕೂಲಕರವಾಗಲಿದೆ ಎಂದ ಅವರು, ಪಟ್ಟಣದಲ್ಲಿನ ಸ್ವಚ್ಛತೆಗೆ ವಿಶೇಷ ಆದ್ಯತೆಯನ್ನು ಕಲ್ಪಿಸಲಾಗಿದ್ದು, ಪುರಸಭೆಯ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿಗಳು ಸಹ ಜನಪ್ರತಿನಿಧಿಗಳಿಗೆ ಸಹಕಾರ ನಿಡಬೇಕು ಎಂದರು.

ಪುರಸಭೆ ಅಧ್ಯಕ್ಷೆ ಬಸ್ಸಮ್ಮ ಕೊಪ್ಪದ, ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ, ವಿ.ಬಿ. ಸೋಮನಕಟ್ಟಿಮಠ, ಸದಸ್ಯರಾದ ಬಾವಾಸಾಬ ಬೆಟಗೇರಿ, ದಾವಲಸಾಬ ಬಾಡಿನ, ದುರಗಪ್ಪ ಹಿರೇಮನಿ, ಮಲ್ಲಯ್ಯಜ್ಜ ಮಹಾಪುರುಷಮಠ, ಸಂಗಪ್ಪ ಜಿಡ್ಡಿಬಾಗಿಲ, ಮುಖ್ಯಾಧಿಕಾರಿ ರಮೇಶ ಹೊಸಮನಿ ಸೇರಿದಂತೆ ಪುರಸಭೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

#### ಹುಡುಗಾಟ ಸಲ್ಲದು

ಪಟ್ಟಣದ ಅಭಿವೃದ್ಧಿ ಮತ್ತು ಸ್ವಚ್ಛತೆಯ ವಿಚಾರದಲ್ಲಿ ಹುಡುಗಾಟ ಸರಿಯಲ್ಲ. ಮುಖ್ಯಾಧಿಕಾರಿಗಳು ಇದನ್ನು ಗಮನಿಸಬೇಕು. ಎಲ್ಲದಕ್ಕೂ ಸದಸ್ಯರೇ ನಿಲ್ಲಲು ಸಾಧ್ಯವಿಲ್ಲ. ಪಟ್ಟಣದ ಅಭಿವೃದ್ಧಿಯ ದೃಷ್ಟಿಯಿಂದ ನಾನು ಕೆಲ ಕಠಿಣ ನಿರ್ಧಾರಗಳನ್ನು ತೆಗೆದುಕೊಂಡಿದ್ದೇನೆ. ಇಲ್ಲದಿದ್ದರೆ ಪಟ್ಟಣದ ಸೌಂದರ್ಯವನ್ನು ವೃದ್ಧಿಸುವುದು ಸವಾಲಾಗಿ ಪರಿಣಮಿಸುತ್ತದೆ. ನಾನು ತೆಗೆದುಕೊಂಡಿರುವ ಕಠಿಣ ನಿರ್ಧಾರಗಳಿಗೆ ಮುಖ್ಯಾಧಿಕಾರಿಗಳು ಸೇರಿದಂತೆ ಪುರಸಭೆಯ ಎಲ್ಲ ಸದಸ್ಯರು ಕೈಜೋಡಿಸಬೇಕು. ಇದರಿಂದ ಪಟ್ಟಣದ ಅಭಿವೃದ್ಧಿ ಮತ್ತು ಸ್ವಚ್ಛತೆ ತಾನಾಗಿಯೇ ಆಗುತ್ತದೆ.

**– ಜಿ.ಎಸ್. ಪಾಟೀಲ.**
**ಶಾಸಕರು, ರೋಣ.**

### ಕರವೇ ಸ್ವಾಭಿಮಾನಿ ಸೇನೆಯ ವತಿಯಿಂದ ರಕ್ತದಾನ ಶಿಬಿರ

# ರಕ್ತವನ್ನು ಕೃತಕವಾಗಿ ಸೃಷ್ಟಿಸಲಾಗದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತಾಲೂಕು ಘಟಕದ ವತಿಯಿಂದ ಶುಕ್ರವಾರ 79ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ, ಇಂದು ವೈದ್ಯಕೀಯ ಕ್ಷೇತ್ರದ ಕ್ಷಿಪ್ರ ಪ್ರಗತಿಯಿಂದ ಹೃದಯ ಸೇರಿ ಮನುಷ್ಯನಿಗೆ ಕೃತಕವಾದ ಅಂಗಗಳನ್ನು ಅಳವಡಿಸಬಹುದಾಗಿದೆ. ಆದರೆ ರಕ್ತವನ್ನು ಮಾತ್ರ ಕೃತಕವಾಗಿ ಸೃಷ್ಟಿಸಲಾಗದು. ಇದೀಗ ರಕ್ತದ ಅವಶ್ಯಕತೆ ಸಾಕಷ್ಟಿದ್ದು, ಈ ಬಗ್ಗೆ ಜಾಗೃತಿಯ ಜತೆಗೆ ಸ್ವಯಂ ರಕ್ತದಾನ ಮಾಡುವ ಅವಶ್ಯಕತೆಯಿದೆ. ಈ ನಿಟ್ಟಿನಲ್ಲಿ ಕರವೇ ಸ್ವಾಭಿಮಾನಿ ಸೇನೆ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ರಕ್ತದಾನ ಶಿಬಿರ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ಕರವೇ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ



ಶರಣು ಗೋಡಿ ಮಾತನಾಡಿ, ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರಕ್ಕೆ ನೆರೆಯ ಸವಣೂರ, ಶಿಗ್ಗಾಂವ, ಕುಂದಗೋಳ, ಶಿರಹಟ್ಟಿ ತಾಲೂಕಿನಿಂದ ನಿತ್ಯ ನೂರಾರು ರೋಗಿಗಳು ಚಿಕಿತ್ಸೆಗೆ ಬರುತ್ತಾರೆ. ಅಪಘಾತ, ಹೆರಿಗೆ ಮತ್ತು ಅಗತ್ಯ ಸಂದರ್ಭಗಳಲ್ಲಿ ಹುಬ್ಬಳ್ಳಿ, ಗದಗಗೆ ಹೋಗಲೇಬೇಕಾದ ಅನಿವಾರ್ಯತೆ ಇತ್ತು. ಆದರೆ ಇದೀಗ ಪಟ್ಟಣದ ಸರಕಾರಿ ಆಸ್ಪತ್ರೆಯಲ್ಲಿಯೇ ರಕ್ತ ಸಂಗ್ರಹಣಾ ಘಟಕ ಪ್ರಾರಂಭಿಸಿದೆ. ಅದಕ್ಕಾಗಿ ರಕ್ತದಾನದ ಶಿಬಿರಗಳನ್ನು ನಡೆಸುವ ನಿಟ್ಟಿನಲ್ಲಿ ಕರವೇ ಸ್ವಾಭಿಮಾನಿ ಸೇನೆ ಸದಾ ಬದ್ಧವಾಗಿದೆ ಎಂದರು. ಮುಖಂಡರಾದ ಪದ್ಮರಾಜ ಪಾಟೀಲ, ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾ ಕಾರ್ಯಾಧ್ಯಕ್ಷ ಇಸ್ಮಾಯಿಲ್ ಆಡೂರ, ತಾಲೂಕಾಧ್ಯಕ್ಷ ನಾಗೇಶ್ ಅಮರಾಪುರ, ಜಿಲ್ಲಾ ರೈತ ಘಟಕದ ಅಧ್ಯಕ್ಷ ಮುತ್ತಣ್ಣ ಮುಂಡವಾಡ, ಶಿರಹಟ್ಟಿ ತಾಲೂಕಾಧ್ಯಕ್ಷ ವೀರೇಶ ಪಸಾರದ, ಕೈಸರ್ ಮಹ್ಮದಲಿ, ಲುಕಮಾನ ಬೆಟಗೇರಿ, ಶರಣಪ್ಪ ಬಸಾಪುರ, ಫಕ್ಕೀರಗೌಡ ಪಾಟೀಲ, ದೇವೇಂದ್ರ ಶಿಂದೆ, ಮೈನು ಮನಿಯಾರ, ಅಶ್ಫಾಕ್ ಬಾಗೋಡಿ, ಸೋಹೈಲ್ ನದಾಫ್ ಮುಂತಾದವರಿದ್ದರು.

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವೈದ್ಯರ ತಂಡದ ಡಾ. ವೆಂಕಟೇಶ ನೇತೃತ್ವದಲ್ಲಿ ರಕ್ತದಾನ ಶಿಬಿರ ನಡೆಯಿತು. ಒಟ್ಟು 30ಕ್ಕೂ ಕಾರ್ಯಕರ್ತರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿದರು. ದಾನಿಗಳಿಗೆ ಜಿಮ್ಸ್‌ನಿಂದ ಪ್ರಮಾಣಪತ್ರ ನೀಡಲಾಯಿತು.

# ನಮ್ಮ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿರ್ವಹಿಸೋಣ

■ವಿಜಯಸಾಕ್ಷಿ ಸುದ್ದಿ, ಗದಗ

ನಿರಂತರವಾಗಿ ಸಾರ್ವಜನಿಕರ ಸೇವೆಯನ್ನು ನಿಷ್ಪಕ್ಷವಾಗಿ ಮಾಡುವ ಮೂಲಕ ನಮ್ಮ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿರ್ವಹಿಸೋಣ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಶುಕ್ರವಾರ ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ದೇಶದ ಹಲವು ಮಹನೀಯರ ತ್ಯಾಗ, ಬಲಿದಾನ, ಹೋರಾಟದ ಫಲವಾಗಿ ನಮಗೆ ಸ್ವಾತಂತ್ರ್ಯ ದೊರೆತಿದೆ. ಅದನ್ನು ಸರಿಯಾಗಿ ಅನುಭವಿಸುವ ಮೂಲಕ ಸರ್ಕಾರಿ ನೌಕರರಾದ ನಾವೆಲ್ಲ ಸಾರ್ವಜನಿಕರ ಸೇವೆಗೆ ನಿರಂತರವಾಗಿ ಶ್ರಮಿಸೋಣ ಎಂದರು.

ಸಮ ಸಮಾಜ ನಿರ್ಮಾಣಕ್ಕಾಗಿ ಕಾರ್ಯನಿರ್ವಹಿಸುವ ಮೂಲಕ ಸರ್ಕಾರದ ಆಶಯ ಈಡೇರಿಸುವ




ಗುರುತರ ಜವಾಬ್ದಾರಿ ನಮ್ಮ ಮೇಲಿದೆ. ಅದನ್ನು ಸರಿಯಾಗಿ, ಕರ್ತವ್ಯ ಶ್ರದ್ಧೆಯ ಮೂಲಕ ನಾವೆಲ್ಲರೂ ನಿಭಾಯಿಸೋಣ ಎಂದು ತಿಳಿಸಿದರು.

ಲಕ್ಷಾಂತರ ಮಹನೀಯರು ತಮ್ಮ ಪ್ರಾಣವನ್ನು ತ್ಯಾಗ ಮಾಡುವ ಮೂಲಕ ನಮಗೆ ಸ್ವಾತಂತ್ರ್ಯ ದೊರಕಿಸಿಕೊಟ್ಟಿದ್ದಾರೆ. ಇದರಲ್ಲಿ ಗದಗ ಜಿಲ್ಲೆಯ ಹಲವಾರು ಮಹನೀಯರು ಪ್ರಾಣತ್ಯಾಗ ಮಾಡಿ ಸ್ವಾತಂತ್ರ್ಯ ದೊರಕಿಸುವಲ್ಲಿ ಶ್ರಮಿಸಿದ್ದಾರೆ. ಅವರೆಲ್ಲರನ್ನೂ ನೆನೆಯುವ ಮೂಲಕ ದೊರೆತಿರುವ ಸ್ವಾತಂತ್ರ್ಯವನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳೋಣ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕೋಟುಮಚಗಿಯಲ್ಲಿ ಮಧ್ಯರಾತ್ರಿ ಧ್ವಜಾರೋಹಣ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಕೋಟುಮಚಗಿ ಗ್ರಾಮದಲ್ಲಿ ಅಖಂಡ ಭಾರತ ಸಂಕಲ್ಪ ದಿನದ ಅಡಿಯಲ್ಲಿ ಭಜರಂಗದಳದಿಂದ ಸ್ವಾತಂತ್ರ್ಯ ದಿನದ ಮುನ್ನಾ ದಿನ ಮಧ್ಯರಾತ್ರಿ ಧ್ವಜಾರೋಹಣವನ್ನು ಮಾರುತಿ ಮಂದಿರದ ಬಯಲಿನಲ್ಲಿ ಆಚರಿಸಲಾಯಿತು.

ಧ್ವಜಾರೋಹಣದ ಮುಖ್ಯ ವಕ್ತಾರರಾಗಿ ರೋಣ ತಾಲೂಕಾ ವಿಶ್ವ ಹಿಂದೂ ಪರಿಷತ್ ಅಧ್ಯಕ್ಷ ರಘುನಾಥ ಕೊಂಡಿ ಆಗಮಿಸಿ ಮಾತನಾಡಿ, ಭಾರತದಲ್ಲಿ ಎಲ್ಲಿಯವರೆಗೆ ಹಿಂದೂಗಳು ಬಹುಸಂಖ್ಯಾತರಾಗಿರುತ್ತಾರೋ ಅಲ್ಲಿಯವರೆಗೆ ಈ ದೇಶದಲ್ಲಿ ಜಾತ್ಯಾತೀತ ಎನ್ನುವ ಪದಕ್ಕೆ ಅರ್ಥವಿದೆ. ಹಿಂದೂ ಸಮಾಜ ಜಾಗೃತಗೊಳ್ಳದಿದ್ದರೆ ಜಾತ್ಯಾತೀತ ಕಲ್ಪನೆ ನಶಿಸಿ ಹೋಗುವುದರಲ್ಲಿ ಯಾವುದೇ ಸಂದೇಹವಿಲ್ಲವೆಂದು ಹೇಳಿದರು. ಇಂದು ನಮ್ಮ ದೇಶ ಭಯೋತ್ಪಾದಕ ಶಕ್ತಿಗಳಿಂದ ನರಳುತ್ತಿದೆ. ಇದನ್ನು ಮೆಟ್ಟಿ ನಿಲ್ಲಬೇಕೆಂದರೆ ಈ ದೇಶದಲ್ಲಿರುವ ನಾವೆಲ್ಲರೂ ಒಂದು ಎಂಬ ಭಾವನೆ ಮೂಡಬೇಕಿದೆ. ಅದಕ್ಕೆ ಇಂತಹ ರಾಷ್ಟ್ರೀಯ ವೇದಿಕೆಗಳು ತಳಹದಿಯಾಗಬೇಕೆಂದು ಪ್ರತಿಪಾದಿಸಿದ ಕೊಂಡಿ, ದೇಶಾಭಿಮಾನದ ಕನಸನ್ನು, ದೇಶಭಕ್ತಿಯನ್ನು ಮಕ್ಕಳಲ್ಲಿ ಇಂದಿನಿಂದಲೇ ಬಿತ್ತುವ ಕೆಲಸವನ್ನು ಮಾಡಬೇಕಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಸೈನಿಕ ಶರಣಪ್ಪ ಚಿಗರಿ ವಹಿಸಿದ್ದರು. ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್ ಅಧ್ಯಕ್ಷ ಶ್ರೀಧರ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ದೇವಪ್ಪ ಬಡಿಗೇರ, ಮುತ್ತು ನಿಡಗುಂದಿ, ಧರ್ಮರಾಜ ಅಣ್ಣಿಗೇರಿ, ಮಲ್ಲಿಕಾರ್ಜುನ ರಮಾಣಿ, ಚಂದ್ರಶೇಖರಯ್ಯ ಭೂಸನೂರಮಠ, ಶರಣಪ್ಪ ನೇಗಲಿ, ಮಂಜು ಕಿತ್ತೂರ, ಮಂಜುನಾಥ ಅಬ್ಬಿಗೇರಿ, ನಾಗಪ್ಪ ಗಾಣಿಗೇರ, ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಈದಮಿಲಾದ ಕಮಿಟಿಯ ಅಧ್ಯಕ್ಷರಾಗಿ ಉಸ್ಮಾನ ಮಾಳೆಕೊಪ್ಪ ಆಯ್ಕೆ



■ವಿಜಯಸಾಕ್ಷಿ ಸುದ್ದಿ, **ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಪ್ರವಾದಿ ಮುಹಮ್ಮದ್ ಪೈಗಂಬರ್ ಜಯಂತಿಯ ಈದ್ ಮಿಲಾದ್ ಕಮಿಟಿ ಅಂಗವಾಗಿ 2025ನೇ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆ ಮಾಡಲಾಯಿತು.

ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಅಕ್ಬರ್‌ಸಾಬ ಬಬರ್ಚಿ ಹಾಗೂ ಈದ್ ಮಿಲಾದ್ ಕಮಿಟಿಯ ಗೌರವ ಅಧ್ಯಕ್ಷ ಬಾಷಸಾಬ ಮಲ್ಲಸಮುದ್ರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಹಿಂದಿನ ಸಭೆ ಕಮಿಟಿ ಲೆಕ್ಕ ಪತ್ರ ನೀಡಿ 13500 ಹಣ ಹಾಗೂ ದಾಖಲೆಗಳನ್ನು ಹಸ್ತಾಂತರ ಮಾಡಲಾಯಿತು.

2025ನೇ ಸಾಲಿನ ಕಮಿಟಿಯ ಅಧ್ಯಕ್ಷರಾಗಿ ಉಸ್ಮಾನ್ ಎಂ ಮಾಳೆಕೊಪ್ಪ, ಉಪಾಧ್ಯಕ್ಷರಾಗಿ ಆರೀಫ್ ಎಂ, ಹುನುಗುಂದ, ಆಶ್ರಿಫ ಅಲಿ ಇಂಜಿನಿಯರ್ ಹಾಗೂ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಶೌಕತ್ ಕಾತರಕಿ, ಪ್ರಧಾನ ಕಾರ್ಯದರ್ಶಿ ಶೌಕತ್ ಅಣ್ಣಿಗೇರಿ, ಯೂಸುಫ್ ಕೊಟ್ಟೂರು ಉಪಸ್ಥಿತರಿದ್ದರು.

### ಅಂಗಾಂಗ ದಾನಿಗಳಿಗೆ ಅಭಿನಂದನಾ ಸಮಾರಂಭ, ಕಿಡ್ನಿ ದಾನಿಗಳಿಗೆ ಸನ್ಮಾನ ಕಾರ್ಯಕ್ರಮ


# ಸೇವಾ ತಂಡಕ್ಕೆ ದೇವರ, ಹಿರಿಯ ಆಶೀರ್ವಾದವಿದೆ

■ವಿಜಯಸಾಕ್ಷಿ ಸುದ್ದಿ, ಗದಗ

2022ರಲ್ಲಿ ಜನರ ಸೇವೆಗಾಗಿ 22 ಕೆಲಸಗಳನ್ನು ಸೇವಾ ತಂಡ ಮಾಡಬೇಕು ಎಂಬ ಸಂಕಲ್ಪ ಕೈಗೊಂಡು, ವೈದ್ಯಕೀಯ ತಪಾಸಣೆ, ಕಣ್ಣಿನ ಶಸ್ತ್ರ ಚಿಕಿತ್ಸೆ, ಕೈ-ಕಾಲು ಜೋಡಣೆ ಸೇರಿದಂತೆ ಹಲವು ಯೋಜನೆ ರೂಪಿಸಲಾಯಿತು. ರಾಜಕೀಯೇತರವಾಗಿ 2022-2023ರ ಅವಧಿಯಲ್ಲಿ 80 ಸಾವಿರ ಜನರನ್ನು ಸೇವಾ ತಂಡದ ಕಾರ್ಯಕರ್ತರು ಸಂಪರ್ಕಿಸಿದ್ದಾರೆ. ರಾಜಕೀಯ ಕಾರ್ಯಕರ್ತರು ಅರ್ಧ ರಾಜಕಾರಣ, ಅರ್ಧ ಸೇವೆ ಮಾಡಿದರೆ ನೆಮ್ಮದಿಯ ನಾಡು, ಶಾಂತಿಯ ನೆಲೆಬೀಡು ಆಗುತ್ತದೆ. ಇದೇ ಸೇವಾ ತಂಡದ ಮೂಲ ಉದ್ದೇಶವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಕಾಟನ್ ಸೇಲ್ ಸೊಸೈಟಿ ಆವರಣದ ಸಭಾಭವನದಲ್ಲಿ ಕೆ.ಎಚ್. ಪಾಟೀಲ ಸೇವಾ ತಂಡದಿಂದ ಅಂಗಾಗಗಳ ದಾನ ಮಾಡಿ ಪ್ರತಿಜ್ಞೆಗೈದು ನೋಂದಾಯಿಸಿದ 1440 ದಾನಿಗಳಿಗೆ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭ ಉದ್ದೇಶಿಸಿ ಸಚಿವರು ಮಾತನಾಡಿದರು.

ಸೇವಾ ತಂಡದಿಂದ ಕೇವಲ




20 ದಿನಗಳಲ್ಲಿ 2 ಸಾವಿರಕ್ಕೂ ಹೆಚ್ಚು ಅಂಗಾಗ ದಾನಿಗಳನ್ನು ಹುಡುಕಿ ದಾನ ಮಾಡಿಸಲಾಗಿದೆ. ಸೇವಾ ತಂಡದ ಕಾರ್ಯಕರ್ತರು ಸೇವೆ ಎನ್ನುವ ಪದಕ್ಕೆ ಬದ್ಧರಾಗಿ ಯಶಸ್ವಿಯಾಗಿ ಕೆಲಸ ಮಾಡಿದ್ದಾರೆ. ರಾಜಕೀಯ ಕಾರ್ಯಕರ್ತರು ಕೇವಲ ರಾಜಕೀಯ ಮಾಡುವದಷ್ಟೇ ಎನ್ನುವ ಮನಸ್ಥಿತಿ ದೇಶದಲ್ಲಿದೆ. ಆದರೆ, ಗದಗ ಮತಕ್ಷೇತ್ರದ ರಾಜಕೀಯ ಕಾರ್ಯಕರ್ತರು ಚುನಾವಣಾ ಸಮಯ ಹೊರತುಪಡಿಸಿ ಸೇವಾ ಮನೋಭಾವದಲ್ಲಿ ತೊಡಗಿ ದೇಶಕ್ಕೆ ಮಾದರಿಯಾಗಿದ್ದಾರೆ. ಕೊರೋನಾ ಸಮಯದಲ್ಲೂ ನಿರಂತರ ಸೇವೆ ಮಾಡಿ ಮಾನವೀಯತೆ ಮೆರೆದಿದ್ದಾರೆ. ಕೊರೋನಾ ಸಮಯದಲ್ಲಿ ರೋಗಿಗಳಿಗೆ ಧೈರ್ಯ, ಆತ್ಮವಿಶ್ವಾಸ ತುಂಬುವ ಕೆಲಸ ಮಾಡಲಾಗಿತ್ತು ಎಂದು ಹೇಳಿದರು.

ಜಿಮ್ಸ್‌ನಲ್ಲಿ ಆಕ್ಸಿಜನ್ ತೆ-ಊಂದರೆ ಆದಾಗ ಸ್ಪಂದಿಸುವ ಕೆಲಸ ಮಾಡಲಾಗಿದೆ. ಕೊಲ್ಹಾಪೂರದಿಂದ 25 ವೆಂಟಿಲೇಟರ್ ತರಿಸಿ ಜನರ ಜೀವ ಉಳಿಸುವ ಕೆಲಸ ಮಾಡಲಾಗಿದೆ. ಪಕ್ಷ, ಜಾತಿ, ಧರ್ಮ ಮೀರಿ ಸೇವಾ ತಂಡ ಕೆಲಸ ಮಾಡುತ್ತಿದೆ. ಸೇವಾ ತಂಡಕ್ಕೆ ದೇವರ ದಯೆ, ಹಿರಿಯ ಆಶೀರ್ವಾದ ಇದೆ. ಪಂಚ ಗ್ಯಾರಂಟಿ ಮೂಲಕ ರಾಜ್ಯದಲ್ಲಿ ಬಡತನವನ್ನು ಬೇರು ಸಮೇತ ಕಿತ್ತು ಹಾಕಿದ್ದೇವೆ. ಶಿರಹಟ್ಟಿ ತಾಲೂಕಿನಲ್ಲಿ ರೋಗಿಗಳ ಮನೆ-ಮನೆಗೆ ತೆರಳಿ ಚಿಕಿತ್ಸೆ ನೀಡುವ ಮಹತ್ವಾಕಾಂಕ್ಷಿ ಯೋಜನೆ ರೂಪಿಸಿದ್ದೇವೆ. ಮುಂದಿನ ದಿನಗಳಲ್ಲಿ ಈ ಕಾರ್ಯವನ್ನು ಜಿಲ್ಲೆಯಾದ್ಯಂತ ವಿಸ್ತರಿಸಲಾಗುವುದೆಂದು ಸಚಿವರು ಭರವಸೆ ನೀಡಿದರು.


ಈ ವೇಳೆ ಮಾಜಿ ಶಾಸಕ ಡಿ.ಆರ್. ಪಾಟೀಲ, ಧಾರವಾಡ ಹಿರಿಯ ಕಾಂಗ್ರೆಸ್ ಮುಖಂಡ ಹಿಂಡಸಗೇರಿ, ಹಾವೇರಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಂಜೀವಕುಮಾರ ನೀರಲಗಿ, ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ, ಕೊಟ್ರೇಶಪ್ಪ ಬಣೆಗಣ್ಣಿ, ಡಾ. ಪ್ಯಾರಾಲಿ ನೂರಾನಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಅಸೂಟಿ, ಅಶೋಕ ಮಂದಾಲಿ, ಸಿದ್ದಲಿಂಗೇಶ ಪಾಟೀಲ, ಹಿರಿಯ ಮುಖಂಡರಾದ ವಾಸಣ್ಣ ಕುರಡಗಿ, ಬಸವರಾಜ ಕಡೆಮನಿ, ಪ್ರಭು ಬುರಬುರೆ, ಜಿ.ಎಸ್. ಗಡ್ಡದೇವರಮಠ, ವಿದ್ಯಾಧರ ದೊಡ್ಡಮನಿ, ಅನಿಲಕುಮಾರ ಸಿದ್ದಮ್ಮನಹಳ್ಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> ಆಗಸ್ಟ್ 14, 2022ರಲ್ಲಿ ಸೇವಾ ತಂಡದ ಉದಯವಾಯಿತು. ಡಾ. ಎಚ್.ಕೆ. ಪಾಟೀಲರು 21 ಸೇವೆಗಳನ್ನು ಗುರುತಿಸಿದರು. ಜುಲೈ 5, 2025ರಲ್ಲಿ ಸೇವಾ ತಂಡವನ್ನು ನೋಂದಾಯಾಸಲಾಯಿತು. ಆಗಸ್ಟ್ 15ರಂದು ಎಚ್.ಕೆ. ಪಾಟೀಲರ ಜನ್ಮದಿನದ ಅಂಗವಾಗಿ ಅಂಗಾಂಗ ದಾನ ಮಾಡಲು ಸೇವಾ ತಂಡದಿಂದ ತಿರ್ಮಾನ ಕೈಗೊಂಡು ಕೇವಲ 19 ದಿನಗಳಲ್ಲಿ ಗದಗ-ಬೆಟಗೇರಿ ವ್ಯಾಪ್ತಿಯಲ್ಲಿ 1440 ಅಂಗಾಗ ದಾನದ ಸಂಕಲ್ಪ ಮಾಡಲಾಗಿದ್ದು, ಇದುವರೆಗೂ 2 ಸಾವಿರಕ್ಕೂ ಅಧಿಕ ಜನರು ಅಂಗಾಂಗ ದಾನದ ಸಂಕಲ್ಪ ಮಾಡಿದ್ದಾರೆ.
>
> **– ಪ್ರಭು ಬುರಬುರೆ.**
> **ಸೇವಾ ತಂಡದ ಅಧ್ಯಕ್ಷರು.**



ಗದಗ: ಸ್ವಾತಂತ್ರ್ಯೋತ್ಸವ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ವಿಕಲಚೇತನ ಇಲಾಖೆಯಿಂದ ಅರ್ಹ ಫಲಾನುಭವಿಗಳಿಗೆ ಲ್ಯಾಪ್ ಟಾಪ್ ಸೇರಿದಂತೆ ಇತರೆ ಉಪಕರಣಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ವಿತರಿಸಿದರು. ಈ ವೇಳೆ ಡಿಸಿ ಸಿ.ಎನ್.ಶ್ರೀಧರ್, ಜಿ.ಪಂ. ಸಿ.ಇಓ ಭರತ್ ಎಸ್, ಎಸ್‌ಪಿ ರೋಹನ್ ಜಗದೀಶ್, ಡಿಸಿಎಫ್ ಸಂತೋಷ ಕುಮಾರ್ ಸೇರಿದಂತೆ ಇತರರು ಇದ್ದರು.

# ನಿಧನ



**ಭೀಮನಗೌಡ ಅಪರಂಜಿ**

ಗದಗ; ವಿಜಯ ಮೆಡಿಕಲ್ ಏಜನ್ಸಿ ಗದಗ ಹಾಗೂ ರಾಘವೇಂದ್ರ ಮೆಡಿಕಲ್ ಸ್ಟೋರ್ಸ್ ಪೇಠಾಲೂರು ಇದರ ಮಾಲೀಕರಾದ ಪ್ರಸನ್ನ ಅಪರಂಜಿ ಇವರ ತಂದೆಯವರಾದ ಭೀಮನಗೌಡ ಅಪರಂಜಿ ಅವರು ಶನಿವಾರ ಮುಂಜಾನೆ ನಿಧನರಾದರು. ಮೃತರಿಗೆ ಅಪಾರ ಬಂದು ಬಳಗವಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka